ಸಂಪುಟ : 10 ಸಂಚಿಕೆ: 306 ಪುಟ : 4+2 ಬೆಲೆ: 3.00 ಗುರುವಾರ ಜನವರಿ 22 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 306 Pages : 4+2 Price : 3.00 Thursday January 22 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಜ. 23 ರಂದು ಬೆಳಗಾವಿ ವಿಭಾಗ ಮಟ್ಟದ ಪಿಂಚಣಿ ಅದಾಲತ್

■ **ವಿಜಯಸಾಕ್ಷಿ ಸುದ್ದಿ, ಗದಗ**

ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ವಿ.ಸಿ. ಸಭಾಂಗಣದಲ್ಲಿ ಜನವರಿ 23 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬೆಳಗಾವಿ ವಿಭಾಗದ ಜಿಲ್ಲೆಗಳಾದ ಉತ್ತರ ಕನ್ನಡ (ಕಾರವಾರ), ಧಾರವಾಡ, ಹುಬ್ಬಳ್ಳಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಹಾವೇರಿ, ಗದಗ ಜಿಲ್ಲೆಗಳ ಸರ್ಕಾರಿ ನಿವೃತ್ತ/ಕುಟುಂಬ ಪಿಂಚಣಿದಾರರ ಕುಂದುಕೊರತೆಗಳ ನಿವಾರಣೆಗಾಗಿ ಮಹಾಲೇಖಾಪಾಲರ ಕಚೇರಿ ಮತ್ತು ಖಜಾನೆ ಇಲಾಖೆ ಸಮನ್ವಯದಲ್ಲಿ ಬೆಳಿಗ್ಗೆ 11 ಗಂಟೆಗೆ ಪಿಂಚಣಿ ಅದಾಲತ್ ಕಾರ್ಯಕ್ರಮವನ್ನು ಹಾಗೂ ಮಧ್ಯಾಹ್ನದ ಸಮಯದಲ್ಲಿ ಜಿಪಿಎಫ್ ಅದಾಲತ್ ಕಾರ್ಯಕ್ರಮವನ್ನು ವೆಬೆಕ್ಸ್ ಮೂಲಕ ಹಮ್ಮಿಕೊಳ್ಳಲಾಗಿದೆ.

ಸದರಿ ವೆಬೆಕ್ಸ್ ಕಾರ್ಯಕ್ರಮವನ್ನು ಜನವರಿ 23 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಗದಗ ಜಿಲ್ಲಾ ಖಜಾನೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.25ರಂದು ರಾಷ್ಟ್ರೀಯ ಮತದಾರರ ದಿನಾಚರಣೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಮತದಾರರ ದಿನಾಚರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಜನವರಿ 25 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಸದರಿ ದಿನದಂದು ರಾಷ್ಟ್ರೀಯ ಕಾರ್ಯಕ್ರಮಕ್ಕೆ ಜಿಲ್ಲಾಡಳಿತ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಅಧಿಕಾರಿ/ ಸಿಬ್ಬಂದಿಗಳು ಹಾಜರಾಗಬೇಕೆಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ.

### ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ

# ಸ್ವಾಭಿಮಾನ, ಆತ್ಮ ವಿಶ್ವಾಸದಿಂದ ಬದುಕಬೇಕು

■ **ವಿಜಯಸಾಕ್ಷಿ ಸುದ್ದಿ, ಗದಗ**

ನಿಜಶರಣ ಅಂಬಿಗರ ಚೌಡಯ್ಯನವರು ತಮ್ಮ ವಚನಗಳ ಮೂಲಕ ಸಮಾಜದ ಸುಧಾರಣೆಗೆ ಶ್ರಮಿಸಿದವರು ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಂಬಿಗರ ಚೌಡಯ್ಯನವರು 12ನೇ ಶತಮಾನದ ಶಿವಶರಣರು. ಉಳಿದೆಲ್ಲ ವಚನಕಾರರಿಗಿಂತ ಭಿನ್ನ ಹಾಗೂ ವಿಶಿಷ್ಟ ವ್ಯಕ್ತಿತ್ವ ಇವರದ್ದಾಗಿತ್ತು. ಬಸವಣ್ಣನವರಿಂದ ಲಿಂಗದ ದೀಕ್ಷೆಯನ್ನು ಪಡೆದರು. ಕಾಯಕ ಅಥವಾ ವ್ಯಕ್ತಿನಾಮವಾದ ಅಂಬಿಗರ ಚೌಡಯ್ಯ ಎಂಬುದೇ ಇವರ ವಚನಗಳ ಅಂಕಿತವಾಗಿದೆ. ಅಂಬಿಗರ ಚೌಡಯ್ಯನವರು ನೇರವಾದ ನುಡಿ, ದಿಟ್ಟವಾದ ನಡೆಗೆ ಹೆಸರಾಗಿದ್ದರು. ನಿಷ್ಠುರವಾದಿಗಳಾಗಿದ್ದು, ಸಮಾಜದಲ್ಲಿನ ಮೂಢನಂಬಿಕೆ, ಕಂದಾಚಾರ ಹೊಡೆದೋಡಿಸಿ ಸಮಾಜ ಸುಧಾರಣೆಗೆ ಶ್ರಮಿಸಿದವರು. ನಾವು ವೈಚಾರಿಕವಾಗಿ ಬದುಕಲು ಕಲಿಯಬೇಕು. ಸ್ವಾಭಿಮಾನ, ಆತ್ಮ ವಿಶ್ವಾಸದಿಂದ ಬದುಕಬೇಕು. ಅಂಬಿಗರ ಚೌಡಯ್ಯನವರ ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಸಾಧಕರಿಗೆ ಸನ್ಮಾನಿಸಲಾಯಿತು.

ನರೇಗಲ್ಲದ ಉಪನ್ಯಾಸಕ ಶಿವಾನಂದ ಗೋಗೇರಿ ಅಂಬಿಗರ ಚೌಡಯ್ಯನವರ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಡಿವೈಎಸ್‌ಪಿ ವಿದ್ಯಾಧರ ನಾಯಕ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹನಬರಟ್ಟಿ, ಅಂಬಿಗರ ಚೌಡಯ್ಯ ಸಮಾಜದ ಜಿಲ್ಲಾಧ್ಯಕ್ಷ ಜೆ.ಬಿ. ಗಾರವಾಡ, ಉಪಾಧ್ಯಕ್ಷ ಸಿ.ಪಿ. ಬಾರಕೇರ, ತಾಲೂಕಾಧ್ಯಕ್ಷ ಡಾ. ಗಣೇಶ ಸುಲ್ತಾನಪುರ, ಪ್ರಮುಖರಾದ ಯಶೋಧಾ ಜಾಲಗಾರ, ಶಕುಂತಲಾ ಜಕನೂರ, ಪ್ರೇಮಾ ಮನಗೂಳಿ, ಕೀರ್ತಿ ಜಕನೂರ, ಪ್ರಕಾಶ ಪೂಜಾರ, ಕೆ.ಎನ್. ಸುಣಗಾರ, ಮಂಜುನಾಥ ಸುಣಗಾರ, ಸುಭಾಸ ಕದಡಿ, ಮಾಲತೇಶ ಬಾರ್ಕಿ, ಮಾರುತಿ ಕೌದಿ, ಚಂದ್ರಶೇಖರ ಅಂಬಿಗೇರ, ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಪ್ರಮುಖರು, ಗಣ್ಯರು, ಹಿರಿಯರು ಹಾಜರಿದ್ದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಅಂಬಿಗರ ಚೌಡಯ್ಯನವರು ನೇರ ನಿಷ್ಠುರವಾದಿಗಳಾಗಿದ್ದರು. ಕಾಯಕ ನಿಷ್ಠೆಗೆ ಹೆಸರಾದ ಅಂಬಿಗರ ಚೌಡಯ್ಯನವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ತಾರತಮ್ಯ ಹೋಗಲಾಡಿಸಿ ಅಂಕು-ಡೊಂಕುಗಳನ್ನು ತಿದ್ದುವ ಮೂಲಕ ಸಮಾಜ ಸುಧಾರಣೆಗೆ ಶ್ರಮಿಸಿದರು. ಸಮಾಜ ಸುಧಾರಣೆಯಾಗಬೇಕಾದರೆ ಶಿಕ್ಷಣವೊಂದೇ ಮಾರ್ಗವಾಗಿದೆ. ಪಾಲಕರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು ಎಂದರು.

### ಹರ್ತಿಯಲ್ಲಿ ಅಲ್ಪಸಂಖ್ಯಾತ ಹೆಣ್ಣುಮಕ್ಕಳ ಮೊರಾರ್ಜಿ ದೇಸಾಯಿ ವಸತಿ ಶಾಲೆ ನೂತನ ಕಟ್ಟಡ ಲೋಕಾರ್ಪಣೆ

# ಅಲ್ಪಸಂಖ್ಯಾತ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಅಲ್ಪಸಂಖ್ಯಾತ ಇಲಾಖೆಯ ಎಲ್ಲ ವಸತಿ ಶಾಲೆಗಳಿಗೂ ಡಿಜಿಟಲ್ ಕ್ಲಾಸ್‌ರೂಮ್ ಸೌಲಭ್ಯ ಕಲ್ಪಿಸಲಾಗುವುದು ಎಂದು ವಸತಿ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರಾದ ಬಿ.ಝಡ್. ಜಮೀರ್ ಅಹ್ಮದ್ ಖಾನ್ ತಿಳಿಸಿದರು.

ಅವರು ಗದಗ ತಾಲ್ಲೂಕಿನ ಹರ್ತಿ ಗ್ರಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅಲ್ಪಸಂಖ್ಯಾತರ ಹೆಣ್ಣುಮಕ್ಕಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನೂತನ ಕಟ್ಟಡವನ್ನು ಮಂಗಳವಾರ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ರಾಜ್ಯ ಸರ್ಕಾರವು ಅಲ್ಪಸಂಖ್ಯಾತ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದು, ಈ ಉದ್ದೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ 4,500 ಕೋಟಿ ರೂ ಬಜೆಟ್ ಒದಗಿಸಲಾಗಿದೆ. ಈ ಅನುದಾನದ ಪ್ರಮುಖ ಭಾಗವನ್ನು ಮಕ್ಕಳ ಶಿಕ್ಷಣಕ್ಕೆ ಬಳಸಲಾಗುತ್ತಿದೆ. ರಾಜ್ಯದಲ್ಲಿ ಪ್ರಸ್ತುತ 2.38 ಲಕ್ಷಕ್ಕೂ ಅಧಿಕ ಮಕ್ಕಳು ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ಹಿಂದಿನ ಅವಧಿಯಲ್ಲಿ ಅನೇಕ ವಸತಿ ಶಾಲೆಗಳು ಆರಂಭಗೊಂಡಿದ್ದು, ಇದೀಗ ಮತ್ತಷ್ಟು ಹೊಸ ವಸತಿ ಶಾಲೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಹರ್ತಿ ನೂತನ ವಸತಿ ಶಾಲೆ ಪ್ರದೇಶ ಅತ್ಯಂತ ಆಕರ್ಷಕ ಕೇಂದ್ರವಾಗಿದ್ದು, ಇಲ್ಲಿ ವಿದ್ಯಾಭ್ಯಾಸ ಮಾಡುವ ಮಕ್ಕಳು ದೇವರಂತೆ ಕಾಣುತ್ತಿದ್ದಾರೆ. ನಿಮ್ಮೆಲ್ಲರ ಬಾಳು ಅಂದವಾಗಿ ರೂಪುಗೊಳ್ಳಲಿ ಎಂದು ಶುಭ ಹಾರೈಸಿದರು.

ನಂತರ ಸಚಿವದ್ವಯರು ವಸತಿ ಶಾಲೆಯ ಮಕ್ಕಳೊಂದಿಗೆ ಸಂವಾದ ನಡೆಸಿ, ಅವರಿಗೆ ಲಭ್ಯವಿರುವ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು. ಮಕ್ಕಳು ಕುತೂಹಲದಿಂದ ತಮ್ಮ ಅಗತ್ಯಗಳನ್ನು ಸಚಿವರ ಮುಂದೆ ಮಂಡಿಸಿದ್ದು, ಅವುಗಳನ್ನು ಪೂರೈಸುವ ಭರವಸೆ ಸಚಿವರು ನೀಡಿದರು. ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ, ಎ.ಎಂ ಹಿಂಡಸಗೇರಿ, ಹರ್ತಿ ಗ್ರಾ.ಪಂ ಅಧ್ಯಕ್ಷೆ ಹಾಲವ್ವ ಕುಬೇರಪ್ಪ ಕುರಿ, ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ರಾಮಕೃಷ್ಣ ರೊಳ್ಳಿ, ಅನ್ವರ ಭಾಷಾ, ತಾ.ಪಂ ಮಾಜಿ ಅಧ್ಯಕ್ಷ ಶರಣಬಸನಗೌಡ ಪಾಟೀಲ, ಪ್ರಭು ಹುಡೇದ, ನಿಂಗಪ್ಪ ಛಲವಾದಿ, ಬಾಪು ಕಿಲ್ಲೇದಾರ, ಪರಪ್ಪ ಕೋಳಿವಾಡ, ಗಂಗಪ್ಪ ಗಡಾದ, ಬಿ.ಟಿ. ಸೋಮರಡ್ಡಿ, ಮಹೇಶ ಪಟ್ಟಣಶೆಟ್ಟಿ, ಎಸ್.ವ್ಹಿ. ಪಾಟೀಲ, ಮರಿದೇವರಮಠ, ಗೂಳಪ್ಪ ಗುಡದೂರ, ಶ್ರೀನಿವಾಸ್ ಮೂರ್ತಿ ಕುಲಕರ್ಣಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಅಮಿತ್ ಬಿದರಿ ಮುಂತಾದವರು ಉಪಸ್ಥಿತರಿದ್ದರು.



ಹರ್ತಿ ವಸತಿ ಶಾಲೆಗೆ ಡಿಜಿಟಲ್ ಗ್ರಂಥಾಲಯ, ಕ್ರಿಕೆಟ್ ಟರ್ಫ್ ಕೋಚಿಂಗ್ ಗ್ರೌಂಡ್, ಚೆಸ್, ಕೇರಮ್ ಹಾಗೂ ಟೇಬಲ್ ಟೆನ್ನಿಸ್ ಒಳಾಂಗಣ ಕ್ರೀಡಾ ಸೌಲಭ್ಯಗಳನ್ನು ಒದಗಿಸುವುದಾಗಿ ಸಚಿವ ಎಚ್.ಕೆ. ಪಾಟೀಲ ಅವರ ಮನವಿಗೆ ಸ್ಪಂದಿಸಿ ಸಚಿವ ಜಮೀರ್ ಅಹ್ಮದ್ ಖಾನ್ ಘೋಷಿಸಿದರು. ವಿವಿಧ ಜಿಲ್ಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದ ವೇಳೆ ನೌಕರರ ಬೇಜವಾಬ್ದಾರಿ ಕಂಡುಬಂದ ಹಿನ್ನೆಲೆಯಲ್ಲಿ ಇದುವರೆಗೆ 9 ನೌಕರರನ್ನು ಸಸ್ಪೆಂಡ್ ಮಾಡಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

## ಜೆಇಇ ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

■ **ವಿಜಯಸಾಕ್ಷಿ ಸುದ್ದಿ, ಗದಗ**


ರಾಷ್ಟ್ರೀಯ ಪರೀಕ್ಷಾ ಪ್ರಾಧಿಕಾರ ನವದೆಹಲಿ ಇವರ ವತಿಯಿಂದ ಜೆಇಇ ಪರೀಕ್ಷೆಗಳು ಜನವರಿ 21 ರಿಂದ ಜನವರಿ 29 ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುದ ಹಿತ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ ಸುತ್ತಲೂ 300 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಜನವರಿ 21 ರಿಂದ ಜನವರಿ 29 ರವರೆಗೆ ಬೆಳಿಗ್ಗೆ 8 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ಜಿಲ್ಲೆಯ ಪರೀಕ್ಷಾ ಕೇಂದ್ರವಾದ ಲಕ್ಷ್ಮೇಶ್ವರದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ ಅಗಡಿ ಇಂಜನೀಯರಿಂಗ್ ಆ್ಯಂಡ್ ಟೆಕ್ನಾಲಜಿ ಕಾಲೇಜಿನಲ್ಲಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಲು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್ , ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೆ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಲಕಲ್ಲ ಡಿಪೋಗೆ ಹೆಮ್ಮೆ: ಕುಮಾರಸ್ವಾಮಿ ವಿರಕ್ತಮಠರಿಗೆ ಸರ್ವೋತ್ತಮ ಪ್ರಶಂಸನಾ ಗೌರವ



ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ
North-Western Karnataka Road Transport Corporation
ಕೇಂದ್ರ ಕಚೇರಿ ಗೋಕುಲ ರಸ್ತೆ ಹುಬ್ಬಳ್ಳಿ
Central Offices – Gokul Road – Hubli -580 030
(ಕಾರ್ಮಿಕ ಮತ್ತು ಕಲ್ಯಾಣ ಇಲಾಖೆ)

ಸಂ:ವಾಕರಸಾಸಂ/ಕೇಂಕ/ಹು/ಕಾರ್ಮಿಕ/ಎಲ್-1/1090/25-26 ದಿನಾಂಕ: 21-01-2026

ರಿಗೆ,
ವಿಭಾಗೀಯ ನಿಯಂತ್ರಣಾಧಿಕಾರಿಗಳು,
ವಾಕರಸಾಸಂಸ್ಥೆ, ಬೆಳಗಾವಿ, ಗದಗ,
ಬಾಗಲಕೋಟೆ, ಹುಬ್ಬಳ್ಳಿ ಗ್ರಾಂ,
ವಿಭಾಗಗಳು.

ಮಾನ್ಯರೇ,

ವಿಷಯ : ಗಣರಾಜ್ಯೋತ್ಸವದ ಅಂಗವಾಗಿ "ಸರ್ವೋತ್ತಮ ಪ್ರಶಂಸನೆಗೆ" ಆಯ್ಕೆಗೊಂಡ ಸಿಬ್ಬಂದಿಗಳನ್ನು ಕೇಂದ್ರ ಕಚೇರಿಗೆ ಕಳುಹಿಸುವ ಬಗ್ಗೆ.

ಉಲ್ಲೇಖ : 1) ಸಂ:ವಾಕರಸಾಸಂ/ಕೇಂಕ/ಹು/ಕಾರ್ಮಿಕ/ಎಲ್-1/1057/25-26 ದಿನಾಂಕ: 10-01-2026.
2) ಸೂಕ್ಷಾಧಿಕಾರಿಗಳ ಆದೇಶ ದಿನಾಂಕ : 20-01-2026.

-o-

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಮಾನದಂಡಗಳನ್ವಯ ಗಣರಾಜ್ಯೋತ್ಸವದ ಅಂಗವಾಗಿ ಸಂಸ್ಥೆಯಲ್ಲಿ 2025ನೇ ವರ್ಷದಲ್ಲಿ ಗರಿಷ್ಠ ಹಾಜರಾತಿ ಹೊಂದಿ, ಯಾವುದೇ ಅಪರಾಧ / ಅಪಘಾತ ಪ್ರಕರಣಗಳು ಇಲ್ಲದೇ ಸರ್ವೋತ್ತಮ ಕಾರ್ಯನಿರ್ವಹಿಸಿದ ಈ ಕೆಳಕಂಡ ಸಿಬ್ಬಂದಿಗಳು "**ಸರ್ವೋತ್ತಮ ಪ್ರಶಂಸನೆ**"ಗೆ ಭಾಜನರಾಗಿರುತ್ತಾರೆ.

| ಕ್ರ.ಸಂ | ನೌಕರರ ಹೆಸರು | ಹುದ್ದೆ | ಕಾರ್ಯಸ್ಥಳ | ವಿಭಾಗ |
|---|---|---|---|---|
| 1 | ಶ್ರೀ ಎಸ್ ಡಿ ಮಾಳಗಿ | ಚಾಲಕ 3838 | ಬೆ-1 | ಬೆಳಗಾವಿ |
| 2 | ಶ್ರೀಮತಿ ಯು ಎಸ್ ನಮಾಜಿ | ನಿರ್ವಾಹಕಿ 1765 | ಬೆಟಗೇರಿ | ಗದಗ |
| 3 | ಶ್ರೀ ಎಂ ಬಿ ಗೌಡರ | ತಾಂಸ | ಇಲಕಲ್ಲ | ಬಾಗಲಕೋಟೆ |
| 4 | ಶ್ರೀಮತಿ ಎಸ್ ವಿ ಕಲಾಲ | ಕರಾಸಾ ಪೇದೆ | ನವಲಗುಂದ | ಹುಬ್ಬಳ್ಳಿ ಗ್ರಾಂ |
| 5 | ಶ್ರೀ ಕೆ ಬಿ ವೀರಕ್ತಮಠ | ಸಹಾಯಕ ಲೆಕ್ಕಿಗ | ಇಲಕಲ್ಲ | ಬಾಗಲಕೋಟೆ |

ಆದುದರಿಂದ 2025ನೇ ಸಾಲಿನಲ್ಲಿ ಸಂಸ್ಥೆಯಲ್ಲಿ ಸರ್ವೋತ್ತಮವಾಗಿ ಕಾರ್ಯನಿರ್ವಹಿಸಿದ ಮೇಲ್ಕಂಡ ಸಿಬ್ಬಂದಿಗಳಿಗೆ (ಪಾಸಪೋರ್ಟ ಅಳತೆಯ ಭಾವಚಿತ್ರದೊಂದಿಗೆ) ಗಣರಾಜ್ಯೋತ್ಸವದ ದಿನದಂದು ಕೇಂದ್ರ ಕಚೇರಿಯಲ್ಲಿ "**ಸರ್ವೋತ್ತಮ ಪ್ರಶಂಸನಾ**" ಪ್ರದಾನ ಮಾಡಲಾಗುತ್ತದೆ. ಈ ಹಿನ್ನಲೆಯಲ್ಲಿ, ಸಮವಸ್ತ್ರ ಹೊಂದಿದ ಸಿಬ್ಬಂದಿಗಳು ಅಂದು ಸಮವಸ್ತ್ರವನ್ನು ಧರಿಸಿಕೊಂಡು ಶಿಸ್ತಿನಿಂದ ದಿನಾಂಕ 26-01-2026 ರ ಗಣರಾಜ್ಯೋತ್ಸವದ ದಿನದಂದು ಕೇಂದ್ರ ಕಚೇರಿಯಲ್ಲಿ ಸರಿಯಾಗಿ ಮುಂಜಾನೆ 07-30 ಘಂಟೆಗೆ ಉಪಸ್ಥಿತರಿರುವಂತೆ ನಿರ್ದೇಶಿಸಿ, ಕಳುಹಿಸುವ ಕ್ರಮಕ್ಕಾಗಿ ಕೋರಲಾಗಿದೆ.

ವಂದನೆಗಳೊಂದಿಗೆ,



■ **ವಿಜಯಸಾಕ್ಷಿ ಸುದ್ದಿ, ಇಲಕಲ್ಲ**

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (NWKRTC)ಯ ಇಲಕಲ್ಲ ಡಿಪೋದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಲೆಕ್ಕಿಗ ಶ್ರೀ ಕುಮಾರಸ್ವಾಮಿ ವಿರಕ್ತಮಠ ಅವರು 2025-26ನೇ ಸಾಲಿನ ಸರ್ವೋತ್ತಮ ಪ್ರಶಂಸನಾ ಗೌರವಕ್ಕೆ ಭಾಜನರಾಗಿದ್ದಾರೆ.

2025ನೇ ಸಾಲಿನಲ್ಲಿ ಗರಿಷ್ಠ ಹಾಜರಾತಿ ಹಾಗೂ ಯಾವುದೇ ಅಪರಾಧ ದಾಖಲೆಗಳಿಲ್ಲದೇ ಶಿಸ್ತುಬದ್ಧವಾಗಿ ಕಾರ್ಯನಿರ್ವಹಿಸಿದ್ದ ಹಿನ್ನೆಲೆ ಅವರನ್ನು ಈ ಗೌರವಕ್ಕೆ ಆಯ್ಕೆ ಮಾಡಲಾಗಿದೆ ಎಂದು ಮುಖ್ಯ ಕಾರ್ಮಿಕ ಮತ್ತು ಕಲ್ಯಾಣ ಅಧಿಕಾರಿ ತಿಳಿಸಿದ್ದಾರೆ. ಈ ಕುರಿತು ಬಾಗಲಕೋಟೆ ವಿಭಾಗೀಯ ನಿಯಂತ್ರಣ ಅಧಿಕಾರಿಗಳಿಗೆ ಪತ್ರದ ಮೂಲಕ ಮಾಹಿತಿ ನೀಡಲಾಗಿದೆ.

ಜನವರಿ 26ರಂದು ಹುಬ್ಬಳ್ಳಿಯ ಕೇಂದ್ರ ಕಚೇರಿಯಲ್ಲಿ ನಡೆಯುವ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ. ಪ್ರಶಸ್ತಿಗೆ ಆಯ್ಕೆಯಾದ ಐದು ಸಿಬ್ಬಂದಿಗಳ ಪೈಕಿ ಕುಮಾರಸ್ವಾಮಿ ವಿರಕ್ತಮಠ ಕೂಡ ಸೇರಿದ್ದಾರೆ.

ಈ ಸಾಧನೆಗೆ ಇಲಕಲ್ಲ ಡಿಪೋದ ವ್ಯವಸ್ಥಾಪಕರು ಹಾಗೂ ಸಿಬ್ಬಂದಿಗಳು ಸಂತಸ ವ್ಯಕ್ತಪಡಿಸಿದ್ದು, ಇದು ಡಿಪೋಗೆ ಸಂದ ಗೌರವ ಎಂದು ಶ್ಲಾಘಿಸಿದ್ದಾರೆ.

### ತಾಲೂಕು ಮಟ್ಟದ ಪಂಚ ಗ್ಯಾರಂಟಿ ಸಭೆಯಲ್ಲಿ ನಾಗರಾಜ ಮಡಿವಾಳರ

# ಫಲಾನುಭವಿಗಳಿಗೆ ಯೋಜನೆಗಳನ್ನು ತಲುಪಿಸಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ಸರಿಯಾಗಿ ತಲುಪಿಸಲು ಅಧಿಕಾರಿಗಳು ಆದ್ಯತೆ ನೀಡಬೇಕು. ಫಲಾನುಭವಿಗಳಿಗೆ ಯೋಜನೆಗಳು ತಲುಪದಿದ್ದಲ್ಲಿ ಕ್ರಮ ಕೈಗೊಳ್ಳಬೇಕು ಎಂದು ತಾಲೂಕಾ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಹೇಳಿದರು.

ಅವರು ಬುಧವಾರ ಪಟ್ಟಣದ ತಾ.ಪಂ ಸಭಾಭವನದಲ್ಲಿ ನಡೆದ ಪಂಚ ಗ್ಯಾರಂಟಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರಕಾರದ ಆದೇಶದಂತೆ ಗ್ರಾಮೀಣ ಪ್ರದೇಶದ ಜನರಿಗೆ 30*40 ನಿವೇಶನಗಳಿಗೆ ಯಾವುದೇ ದಾಖಲೆ ಕೇಳದೆ ವಿದ್ಯುತ್ ಸಂಪರ್ಕ ಕೊಡಬೇಕು. ಗ್ರಾಮೀಣ ಭಾಗದಲ್ಲಿ ವಿದ್ಯುತ್ ಕಡಿತಗೊಳಿಸಬಾರದು. ಹೊಸ ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಕಾಪಾಡಬೇಕು. ಬರುವ ದಿನಗಳಲ್ಲಿ ವಿದ್ಯಾರ್ಥಿಗಳ ಪರೀಕ್ಷೆಗಳು ಪ್ರಾರಂಭವಾಗುವದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಬಸ್ ಸೌಲಭ್ಯ ನೀಡಲು ಕ್ರಮ ವಹಿಸುವಂತೆ ಹೇಳಿದರು.

ಇದೇ ವೇಳೆ, ಸೋಮಯ್ಯ ಕಲ್ಮಠ ಅವರು ವೃದ್ಧೆ ತಾಯಿ ಗಂಭೀರ ಅರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದು, ರೇಷನ್ ಕಾರ್ಡ್ ಅವಶ್ಯಕತೆ ಇದೆ ಎಂದು ಮನವಿ ಸಲ್ಲಿಸಿದರು. ಅದಕ್ಕೆ ಅಧ್ಯಕ್ಷರು ಪ್ರತಿಕ್ರಿಯಿಸಿ, ತುರ್ತಾಗಿ ಮಾಡಿಸಿ ಕೊಡಲಾಗುವುದು ಎಂದು ಭರವಸೆ ನೀಡಿದರು.

ಗ್ಯಾರಂಟಿ ಸಮಿತಿ ಸದಸ್ಯರಾದ ಶಿವರಾಜಗೌಡ ಪಾಟೀಲ, ಹಸನ ಜಂಗ್ಲಿ, ರಮಾಜಾನಸಾಬ್ ನದಾಫ್ ವಿವಿಧ ಸಮಸ್ಯೆಗಳ ಕುರಿತು ಗಮನ ಸೆಳೆದರು. ಹೆಸ್ಕಾಂ ಅಧಿಕಾರಿ ಆಂಜನೇಯಪ್ಪ ವಿದ್ಯುತ್ ಸಮಸ್ಯೆಗಳ ಬಗ್ಗೆ ಸಾರ್ವಜನಿಕ ಸಹಾಯವಾಣಿ-1912ಕ್ಕೆ ಕರೆ ಮಾಡಿ ದೂರ ಸಲ್ಲಿಸಬಹುದು ಎಂದು ಹೇಳಿದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ಪಂಚ ಗ್ಯಾರಂಟಿಯ ಯೋಜನೆಗಳ ಬಗ್ಗೆ ಹೊಸದಾಗಿ ಸರಕಾರದಿಂದ ಆದೇಶ ಬಂದರೆ ಅಧಿಕಾರಿಗಳು ಅದನ್ನು ನಮ್ಮ ಗಮನಕ್ಕೆ ತಂದಲ್ಲಿ, ಗ್ರಾಮ ಮಟ್ಟದಲ್ಲಿ ಪ್ರಚಾರ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಿಡಿಪಿಓ ಮೃತ್ಯುಂಜಯ ಗುಡ್ಡದ ಅನ್ವೇರಿ, ಗ್ಯಾರಂಟಿ ಸಮಿತಿ ಸದಸ್ಯರಾದ ಜಯಕ್ಕ ಕಳ್ಳಿ, ಖಾದರಭಾಷಾ ರಿತ್ತಿ, ರಮೇಶ ಬಾರಕೇರ, ಕಲ್ಲಪ್ಪ ಗಂಗಣ್ಣವರ, ಶಶಿಕಲಾ ಬಡಿಗೇರ ಮುಂತಾದವರಿದ್ದರು.




ಸಾರಿಗೆ ಘಟಕ ವ್ಯವಸ್ಥಾಪಕಿ ಸವಿತಾ ಆದಿ ಮಾತನಾಡಿ, ಈಗಾಗಲೇ ಹೊಸ ಬಸ್ ನಿಲ್ದಾಣದ ಶೌಚಾಲಯದಲ್ಲಿ ಹೆಚ್ಚಿನ ದರ ತೆಗೆದುಕೊಳ್ಳುವ ಬಗ್ಗೆ ದೂರು ಕೇಳಿಬಂದಿದ್ದು, ಗುತ್ತಿಗೆದಾರನಿಗೆ ಈ ಬಗ್ಗೆ ನೋಟೀಸ್ ನೀಡಲಾಗಿತ್ತು. ಅದಕ್ಕೆ ಅವರು ಉತ್ತರಿಸಿಲ್ಲ. ಈ ಹಿನ್ನೆಲೆಯಲ್ಲಿ ಜ. 1ರಿಂದ ಬೇರೆಯವರಿಗೆ ಟೆಂಡರ್ ನೀಡಲಾಗಿದೆ ಎಂದರು.

## ಹಿಂದೂ ಸಮ್ಮೇಳನ ಯಶಸ್ವಿಗೊಳಿಸಿ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಜ. 22ರಂದು ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ ಜರುಗಲಿರುವ ಹೋಬಳಿ ಮಟ್ಟದ ಹಿಂದೂ ಸಮ್ಮೇಳನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಸ್ತ ಹಿಂದೂ ಕಾರ್ಯಕರ್ತರು ಭಾಗವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕೆಂದು ಬೆಳ್ಳಟ್ಟಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ತಿಮ್ಮರಡ್ಡಿ ಮರಡ್ಡಿ ಹೇಳಿದರು.

ಅವರು ಬುಧವಾರ ಹಿಂದೂ ಸಮ್ಮೇಳನದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಾಬ್ದಿ ಸಂಭ್ರಮದ ಪ್ರಯುಕ್ತ ಜ. 22ರ ಸಂಜೆ 4 ಗಂಟೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಶೋಭಾಯಾತ್ರೆ, ಸಂಜೆ 5 ಗಂಟೆಗೆ ಭೀಮರಡ್ಡಿ ಸರ್ಕಲ್‌ನಲ್ಲಿ ಬೃಹತ್ ಸಮಾವೇಶ ಜರುಗಲಿದೆ. ಇದರ ಸಾನ್ನಿಧ್ಯವನ್ನು ಬನ್ನಿಕೊಪ್ಪದ ಸುಜ್ಞಾನದೇವ ಸ್ವಾಮೀಜಿ, ಬೆಳ್ಳಟ್ಟಿಯ ಬಸವರಾಜ ಸ್ವಾಮೀಜಿ ವಹಿಸಲಿದ್ದು, ಅಧ್ಯಕ್ಷತೆಯನ್ನು ರಾಜೇಂದ್ರಕುಮಾರ ಹಲಗಲಿ ವಹಿಸಲಿದ್ದಾರೆ. ದಿಕ್ಸೂಚಿ ಭಾಷಣವನ್ನು ನಾಗಪುರದ ಅಖಿಲ ಭಾರತೀಯ ಸಂಘಟನಾಮಂತ್ರಿ ಭಾರತೀಯ ಶಿಕ್ಷಣ ಮಂಡಲದ ಶಂಕರಾನಂದ ಜಿ ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಮೋಹನ ಗುತ್ತೆಮ್ಮನವರ, ಸಿದ್ರಾಮಪ್ಪ ಮೊರಬದ, ಮಹೇಶ ಬಡ್ನಿ, ಕೊಟ್ರೇಶ ಸಜ್ಜನರ, ಸುರೇಶ ಬೆಲಹುಣಸಿ, ಕೊಟ್ರೇಶ ಅಕ್ಕೂರ, ಶಿವಲಿಂಗಪ್ಪ ಅಡರಕಟ್ಟಿ, ಶಂಕರ ಬಡಿಗೇರ, ಹೇಮಂತರಡ್ಡಿ ಅಳವಂಡಿ, ಪ್ರಶಾಂತ ಕೋಡಿಹಳ್ಳಿ, ಫಕ್ಕೀರಡ್ಡಿ ಮರಡ್ಡಿ, ಅಂದಪ್ಪ ಗುತ್ತೆಮ್ಮನವರ, ಗೌತಮ ಹಳ್ಳೆಮ್ಮನವರ, ಕೋಟೇಶ ಪೂಜಾರ, ವೀರೇಶ ಕುರವತ್ತಿ, ರಾಘವೇಂದ್ರ ಬಡಿಗೇರ, ಆನಂತ ಸತ್ಯಮ್ಮನವರ, ಮಂಜುನಾಥ ಮಾಚೇನಹಳ್ಳಿ ಮುಂತಾದವರು ಉಪಸ್ಥಿತರಿದ್ದರು.

## 'ಅಮೆರಿಕಾ ಅಧ್ಯಕ್ಷನ ಹತ್ಯೆಯ ಸಂಚು ರೂಪಿಸಿದರೆ ಇರಾನ್ 'ಭೂಮಿಯಿಂದ ನಾಶವಾಗುತ್ತದೆ': ಡೊನಾಲ್ಡ್ ಟ್ರಂಪ್

**■ವಿಜಯಸಾಕ್ಷಿ ಸುದ್ದಿ, ವಾಷಿಂಗ್ಟನ್**

ಟೆಹ್ರಾನ್ ಅಮೆರಿಕದ ನಾಯಕನನ್ನು ಹತ್ಯೆ ಮಾಡುವಲ್ಲಿ ಯಶಸ್ವಿಯಾದರೆ, ಇರಾನ್ ಅನ್ನು "ಈ ಭೂಮಿಯಿಂದಲೇ ಅಳಿಸಿಹಾಕಲಾಗುವುದು' ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಇರಾನ್‌ಗೆ ಎಚ್ಚರಿಕೆ ನೀಡಿದ್ದಾರೆ.

ಬೆದರಿಕೆಗಳ ಬಿಸಿ ವಿನಿಮಯದಲ್ಲಿ, ಇರಾನ್ ಮತ್ತು ಅಮೆರಿಕ ಎರಡೂ ದೇಶಗಳ ನಾಯಕರು ಹತ್ಯೆಯಾದರೆ ವ್ಯಾಪಕ ಯುದ್ಧಗಳ ಬೆದರಿಕೆಯನ್ನು ಎರಡೂ ದೇಶಗಳು ಹಾಕುತ್ತಿವೆ.

79 ವರ್ಷದ ಟ್ರಂಪ್ ಜೀವಕ್ಕೆ ಇರಾನ್ ಬೆದರಿಕೆ ಹಾಕುತ್ತಿರುವ ಬಗ್ಗೆ ಪ್ರಶ್ನೆ ಕೇಳಿದ ಮಾಧ್ಯಮಗಳಿಗೆ ಉತ್ತರಿಸಿದ ಟ್ರಂಪ್ "ನನಗೆ ತುಂಬಾ ದೃಢವಾದ ಸೂಚನೆಗಳಿವೆ. ಏನು ಬೇಕಾದರೂ ಆಗಲಿ, ಅವರು ಅದನ್ನು ಮಾಡಲು ಯೋಚಿಸಿದರೆ. ಅವರನ್ನು ಈ ಭೂಮಿಯ ಮುಖದಿಂದ ಅಳಿಸಿಹಾಕುತ್ತಾರೆ" ಎಂದು ಟ್ರಂಪ್ ಮಂಗಳವಾರ ಪ್ರಸಾರವಾದ ನ್ಯೂಸ್ ನೇಷನ್ ಸಂದರ್ಶನದಲ್ಲಿ ಹೇಳಿದ್ದಾರೆ.

### ಸೂಡಿ ಗಣೇಶ ಜಯಂತಿ ನಿಮಿತ್ತ ವಿಶೇಷ ಲೇಖನ

# ನಂದಿಶಿರೋದ್ಭವ ಗಣಪತಿಯ ಮಹಿಮೆ

ಗಜೇಂದ್ರಗಡ ತಾಲೂಕಿನಲ್ಲಿರುವ ಇತಿಹಾಸ ಪ್ರಸಿದ್ಧ ಸೂಡಿ (ಸೊಂಡಿಲಾಪುರ) ಗ್ರಾಮ ಶಿಲ್ಪ ಕಲೆಯಲ್ಲಿ ತನ್ನದೇ ಆದ ಪ್ರಖ್ಯಾತಿಯನ್ನು ಹೊಂದಿದೆ. ಪೌರಾಣಿಕವಾಗಿ ಹಲವಾರು ರಾಜರು ಗ್ರಾಮವನ್ನು ರಾಜಧಾನಿಯಾಗಿಟ್ಟುಕೊಂಡು ಆಳ್ವಿಕೆ ಮಾಡಿದ್ದಾರೆ. ಅದರ ಪ್ರತಿರೂಪವಾಗಿ ಇಲ್ಲಿ ಅನೇಕ ಶಾಸನಗಳು, ದೇವಸ್ಥಾನಗಳು, ಪುಷ್ಕರಣಿ, ಟಂಕಸಾಲೆ, ವೀಕ್ಷಣಾ ಗೋಪುರವನ್ನು ಇಂದಿಗೂ ಕಾಣಬಹುದು. ಈ ಗ್ರಾಮದ ಗರ್ಭಸ್ಥಾನವಾದ ಹುಡೇದಗಡ್ಡಿ ಓಣಿಯಲ್ಲಿ ಸುಮಾರು 1100 ವರ್ಷಗಳ ಹಿಂದೆ ಜಕಣಾಚಾರ್ಯ ನಿರ್ಮಿಸಿದ ಶ್ರೀ ಮಹಾಗಣಪತಿ ದೇವಸ್ಥಾನವು ತನ್ನ ಗರ್ಭದಲ್ಲಿ ಸಾಕಷ್ಟು ಅದ್ಭುತವಾದ ಶಕ್ತಿಯನ್ನು ಹುದುಗಿಸಿಟ್ಟುಕೊಂಡಿದೆ.

ಅಮರಶಿಲ್ಪಿ ಜಕಣಾಚಾರ್ಯರಿಂದ ನಿರ್ಮಿತವಾದ ಹಾಗೂ ಪ್ರಕಾಂಡ ಪಂಡಿತರು, ರಾಜ್ಯ ಪ್ರಶಸ್ತಿ ವಿಜೇತರು, ಶ್ರೀ ಚಿದಂಬರ ಪಂಚಾಂಗ ಕತೃಗಳಾದ ಪ.ಪೂ ಶ್ರೀ ರಾಮಶಾಸ್ತ್ರಿಗಳಿಂದ ಪೂಜಿಸಲ್ಪಟ್ಟ ಸಿದ್ಧಿಪ್ರದ ಶ್ರೀ ಮಹಾಗಣಪತಿಯು ಸುಮಾರು 1100 ವರ್ಷಗಳಿಂದ ಭಕ್ತರಿಗೆ ಸಾಕಷ್ಟು ವರಪ್ರಸಾದಗಳನ್ನು ನೀಡುತ್ತಿದ್ದಾನೆ. ಈ ಗಣಪತಿಯು ಐತಿಹಾಸಿಕ, ಧಾರ್ಮಿಕವಾಗಿ ಸಾಕಷ್ಟು ವಿಶೇಷತೆಗಳಿಂದ ಕೂಡಿದ್ದು, ಭಕ್ತರ ಉದ್ಧಾರಕ್ಕಾಗಿ ಕಟಿಬದ್ಧನಾಗಿ ನಿಂತಿದ್ದಾನೆ. ಸುಮಾರು 3 ಅಡಿ ಎತ್ತರವಿರುವ ಶ್ರೀ ಮಹಾಗಣಪತಿಯು ಕುಳಿತಿರುವ ಭಂಗಿಯಲ್ಲಿದ್ದು, ಇತಿಹಾಸಕಾರರ ಪ್ರಕಾರ ವಿಶಿಷ್ಟ ರೀತಿಯಾದ ಪದ್ಮಶೀರ್ಷ ಎಂಬ ವಿಶೇಷವಾದ ಕಿರೀಟ ಧರಿಸಿದ್ದಾನೆ ಎಂದು ಉಲ್ಲೇಖಿಸಿದ್ದಾರೆ.

ಗ ' ಣ ಪ ' ತಿ ೦ ) ' ) ) ತ್ರಿನೇತ್ರಧಾರಿಯಾಗಿದ್ದಾನೆ. ಇದರಿಂದ ಪುರಾತನದಲ್ಲಿ ದೇವಸ್ಥಾನಕ್ಕೆ ಗಣೇಶ್ವರ ದೇವಸ್ಥಾನವೆಂತಲೂ ಕರೆಯುತ್ತಿದ್ದರು. ಸಹಜವಾಗಿ ಗಣಪತಿಗೆ ಎಡದಂತ ಪೂರ್ಣವಾಗಿರುತ್ತದೆ, ಆದರೆ ಮಹಾಗಣಪತಿಯ ಬಲದಂತ ಪೂರ್ಣವಾಗಿರುವದು ಒಂದು ವಿಶೇಷವಾದರೆ, ಅದಲ್ಲಿರುವ"ನರಸಿಂಹ ಕವಚ"ಗಣಪತಿಯ ಮತ್ತೊಂದು ರೂಪವನ್ನು ತೋರಿಸುತ್ತದೆ. ಇದರಿಂದ ಗಣಪತಿ ಶಕ್ತಿಗೆ ಇನ್ನಷ್ಟು ಪೌಷ್ಠಿಕತೆಯನ್ನು ಹೊಂದಿದಂತಾಗಿದೆ.

ಸಹಜವಾಗಿ ದೇವಾನು ದೇವತೆಗಳು ಆಭರಣಗಳಿಂದ ಕಂಗೊಳಿಸುತ್ತಿದ್ದರೆ ಈ ಗಣಪತಿ ಮಾತ್ರ ಘಂಟಾಹಾರ ಹಾಗೂ ಕರ್ಣಕುಂಡಲಗಳಿಂದ ಶೋಭಿತನಾಗಿ ಗಜವದನ ರೂಪದಲ್ಲಿ ಆಸೀನನಾಗಿದ್ದಾನೆ.

ಅನುಷ್ಠಾನಕ್ಕೆ ಅನುವಾಗಲೆಂದು ಉದರ ಸಮೇತ ಕಾಲಿಗೆ ಕಟ್ಟಿಕೊಂಡ 'ಅರ್ಧಯೋಗಪಟ್ಟ' ಇರುವದರಿಂದ 'ಅನುಷ್ಠಾನ ಸಿದ್ಧಿ ಗಣಪತಿ' ಎಂದು ಕರೆಯುವರು. ಜಕಣಾಚಾರ್ಯ ತನ್ನ ಸಂಪೂರ್ಣವಾದ ಕಲಾ ಕೌಶಲ್ಯಗಳನ್ನು ಬಳಸಿಕೊಂಡು ಸಂಪೂರ್ಣ (ಮುಂಬದಿ ಹಾಗೂ ಹಿಂಬದಿ) ರೀತಿಯಾದ ಕೆತ್ತನೆಯನ್ನು ಮಾಡುವ ಮೂಲಕ ಶ್ರೀ ಮಹಾಗಣಪತಿ ಮೂರ್ತಿಯ ಮೆರಗನ್ನು ಹೆಚ್ಚಿಸಿದ್ದಾನೆ.

25 ವರ್ಷಗಳ ಹಿಂದೆ ತ್ರಿಕಾಲ ಜ್ಞಾನಿಗಳಾದ ನರಸೋಬವಾಡಿಯ ಪ.ಪೂ ದಿ. ಶ್ರೀ ನಾಗೇಶಭಟ್ಟ ಗಣೇಶಭಟ್ಟ ಜೋಶಿ ತಮ್ಮ ಅಂತರಂಗದ ದಿವ್ಯ ಜ್ಞಾನದಿಂದ ಮಹಾಗಣಪತಿಯ ಮಹತ್ವ ತಿಳಿದು ಸ್ವತಃ ದರ್ಶನಕ್ಕಾಗಿ ಶ್ರೀ ಕ್ಷೇತ್ರ ಸೂಡಿಗೆ ಆಗಮಿಸಿದರು. ಪೂಜ್ಯರು ಶ್ರೀಮಹಾಗಣಪತಿಯ ಮುಂದೆ ಧ್ಯಾನಸ್ಥಿತರಾಗಿ ಕುಳಿತು ಈ ಮಹಾಗಣಪತಿ 'ಜಾಗೃತ ಗಣಪತಿ'ಯಾಗಿರುವನು. ನಂಬಿದವರ ಉದ್ಧಾರಕ್ಕಾಗಿ ಕಟಿಬದ್ಧನಾಗಿದ್ದಾನೆ, ಇನ್ನು ಮುಂದೆ ಭಕ್ತ ಕುಲಕೋಟಿ ಉದ್ಧರಿಸುವದಕ್ಕಾಗಿ ಪ್ರತಿ ವರ್ಷ ಮಾಘ ಶುದ್ಧ ಚತುರ್ಥಿಯಂದು ಶ್ರೀ ಗಣೇಶಜಯಂತಿ ಆಚರಿಸಿರಿ ಎಂದು ಆದೇಶಿಸಿದರು. ಅಂದಿನಿಂದ ಇಂದಿನವರೆಗೆ ಶ್ರೀ ಮಹಾಗಣಪತಿಯು ತನ್ನ ಲೀಲೆಗಳನ್ನು ತೋರಿಸುವ ಮೂಲಕ ಭಕ್ತರಿಗೆ ವಿದ್ಯೆ, ಅನಾರೋಗ್ಯ ನಿವಾರಣೆ, ಸಂತಾನ ಪ್ರಾಪ್ತಿ ಇನ್ನೂ ಹಲವಾರೂ ಕಾರ್ಯಗಳಲ್ಲಿ ಫಲವನ್ನು ನೀಡುವ ಮೂಲಕ ಭಕ್ತರ ಜೀವನವನ್ನು ಉದ್ಧರಿಸಿದ್ದಾನೆ.



ಸುಮಾರು 2014ನೇ ಇಸ್ವಿಯಿಂದ ನಂದಿಯ ಶಿರದಲ್ಲಿ ಗಣಪತಿಯು ಉದ್ಭವಿಸಿದ್ದಾನೆ. ಕಲ್ಮೇಶ್ವರನ ಪಕ್ಕದಲ್ಲಿರುವ ನಂದಿಯ ಶಿರದಲ್ಲಿ ಗಣಪತಿಯ ಉದ್ಭವಗೊಂಡಿದ್ದು ಗಮನಕ್ಕೆ ಬಂದಿತಾದರೂ ಗುರು ಮುಖೇನ ಪ್ರಕಟವಾದರೆ ಉತ್ತಮ ಎಂದುಕೊಂಡಾಗ ಆಶ್ಚರ್ಯಕರ ಘಟನೆಯೊಂದು ನಡೆಯಿತು. 2015ನೇ ಇಸ್ವಿಯಲ್ಲಿ ಭಕ್ತರೊಬ್ಬರು ತಮ್ಮ ಸಮಸ್ಯೆಯನ್ನು ಹೊತ್ತು ಶೃಂಗೇರಿಯ ಶ್ರೀ ಚಂದ್ರಶೇಖರ ಗುರೂಜಿ ಬಳಿ ತೆರಳಿದಾಗ, ಈ ದೇವಸ್ಥಾನದ ಮುಖ್ಯದೇವರಲ್ಲದೆ ನಂದಿ ಮೂರ್ತಿಯಲ್ಲಿ ಗಣಪತಿ ಉದ್ಭವಗೊಂಡಿದ್ದಾನೆ.

ಆ ಗಣಪತಿ ನಿಮ್ಮ ಕಷ್ಟ ದೂರ ಮಾಡುತ್ತಾನೆ ಎಂದು ತಮ್ಮ ಭಕ್ತರ ಮೂಲಕ ವಿಷಯ ಪ್ರಕಟಿಸಿದಾಗ ಧನ್ಯತಾ ಭಾವ ಮೂಡಿತು. ಅದಕ್ಕಾಗಿಯೇ ಹೇಳಿದ್ದು, ಜಕಣಾಚಾರ್ಯ ನಿರ್ಮಿತ ಗಣಪತಿ ದೇವಸ್ಥಾನ ತನ್ನ ಗರ್ಭದಲ್ಲಿ ಸಾಕಷ್ಟು ಅದ್ಭುತವಾದ ಶಕ್ತಿಯನ್ನು ಹುದುಗಿಸಿಟ್ಟುಕೊಂಡಿದೆ.

ಬಹುಶಃ ಮಹಾಗಣಪತಿ ದೇವಸ್ಥಾನಕ್ಕೂ ತ್ರಿಕಾಲ ಜ್ಞಾನಿಗಳಿಗೂ ಅವಿನಾಭಾವ ಸಂಬಂಧತೋರುತ್ತದೆ. ನಿದರ್ಶನ ಎಂಬಂತೆ ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನವರಾದ ಪ.ಪೂ. ಶ್ರೀ ವಿಷ್ಣುಮೂರ್ತಿಭಟ್ಟ ಗುರುಗಳ ಬಳಿ ಅವರ ಭಕ್ತರೊಬ್ಬರ ಸಮಸ್ಯೆಯನ್ನು ಕೇಳಿದ್ದಾರೆ, ಅದಕ್ಕೆ ಪರಿಹಾರವಾಗಿ ಈ ನಂದಿಶಿರೋದ್ಭವ ಗಣಪತಿ ಅವರಿಗೆ ಗೋಚರಿಸಿದ್ದಾನೆ.

**– ರಘೋತ್ತಮ ಕೊಪ್ಪರ್.**
ಪತ್ರಕರ್ತರು, ಪಾರಂಪರಿಕ ವೈದ್ಯರು–ಗದಗ.

### ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಸಮಿತಿ ಅಧ್ಯಕ್ಷ ಬಸವರಾಜ ವಂಕಲಕುಂಟಿ

# ಹೋಬಳಿ ಮಟ್ಟದ ಹಿಂದೂ ಸಮ್ಮೇಳನ ಜ.24ಕ್ಕೆ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಹೋಬಳಿ ಮಟ್ಟದ ಹಿಂದೂ ಸಮ್ಮೇಳನ ಜ. 24ರಂದು ನರೇಗಲ್ಲದ ಹಿರೇಮಠದ ಸಭಾಭವನದಲ್ಲಿ ಜರುಗಲಿದೆ ಎಂದು ಸಮ್ಮೇಳನ ಸಮಿತಿ ಅಧ್ಯಕ್ಷ ಬಸವರಾಜ ವಂಕಲಕುಂಟಿ ಹೇಳಿದರು.

ನರೇಗಲ್ಲ ಬಿಇಡಬ್ಲು ಇಂಡಸ್ಟ್ರಿಯಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಹಿಂದೂ ಸಮ್ಮೇಳನ ಬಹಳ ಅದ್ದೂರಿಯಾಗಿ ಜರುಗಲಿದ್ದು, ನರೇಗಲ್ಲ ಸೇರಿದಂತೆ ಸುತ್ತಮುತ್ತಲಿನ 21 ಹಳ್ಳಿಗಳನ್ನು ನಮ್ಮೆಲ್ಲ ಕಾರ್ಯಕರ್ತರೊಂದಿಗೆ ಸಂಪರ್ಕಿಸಿ ಸಮ್ಮೇಳನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಕೋರಿದ್ದೇವೆ. ಈ ಸಮ್ಮೇಳನ ಒಂದು ಜಾತಿ, ಪಕ್ಷ, ಪಂಗಡಕ್ಕೆ ಸೀಮಿತವಾಗದೆ ಪ್ರತಿಯೊಬ್ಬ ವ್ಯಕ್ತಿ ಭಾರತೀಯ ಪ್ರಜೆಯಾಗಿ ಈ ಸಮ್ಮೇಳನದಲ್ಲಿ ಅತ್ಯಂತ ಸಂತೋಷದಿಂದ ಪಾಲ್ಗೊಳ್ಳಲು ವಿನಂತಿಸಲಾಗಿದೆ ಎಂದರು.

ಜ. 24ರಂದು ಮಧ್ಯಾಹ್ನ 3 ಗಂಟೆಗೆ ಪಟ್ಟಣದ ಗದಗ ರಸ್ತೆಯಲ್ಲಿನ ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದಿಂದ ಶೋಭಾಯಾತ್ರೆ ಹೊರಡಲಿದ್ದು, ಮೆರವಣಿಗೆಗೆ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಚಾಲನೆ ನೀಡಲಿದ್ದಾರೆ. ಅಲ್ಲಿಂದ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಸಾಗಲಿದೆ. ಇದಕ್ಕೂ ಮುಂಚಿತವಾಗಿ ಜ. 23ರಂದು ಬೈಕ್ ರ್‍ಯಾಲಿ ನಡೆಯಲಿದೆ ಎಂದು ಬಸವರಾಜ ತಿಳಿಸಿದರು.

ಸಮ್ಮೇಳನ ಸಮಿತಿ ಉಪಾಧ್ಯಕ್ಷ ಡಾ. ಆರ್.ಕೆ. ಗಚ್ಚಿನಮಠ ಮಾತನಾಡಿ, ಶೋಭಾಯಾತ್ರೆ ಸಾಗಲಿರುವ ರಾಜ ಬೀದಿಗಳನ್ನು ಹಸಿರು ತೋರಣ, ಕೇಸರಿ ಪತಾಕೆಗಳೊಂದಿಗೆ ಸಿಂಗರಿಸಲಿದ್ದಾರೆ. ತೆರೆದ ವಾಹನದಲ್ಲಿ ಭಾರತ ಮಾತೆಯ ಭಾವಚಿತ್ರವನ್ನಿರಿಸಿ ಮುಂದೆ ಡೊಳ್ಳು, ಭಜನೆ, ಗೊಂಬೆ ಕುಣಿತ ಹಾಗೂ ಮರಗಾಲು ಕುಣಿತ ಸೇರಿದಂತೆ ವಿವಿಧ ವಾದ್ಯಗಳೊಂದಿಗೆ ಮೆರವಣಿಗೆ ಸಾಗಲಿದೆ. ತಮ್ಮ ಮಕ್ಕಳಿಗೆ ವಿವಿಧ ರಾಷ್ಟ್ರೀಯ ನಾಯಕರ ವೇಷ–ಭೂಷಣಗಳನ್ನು ತೊಡಿಸಿ ಯಾತ್ರೆಯೊಂದಿಗೆ ಪ್ರದರ್ಶಿಸಲು ತಿಳಿಸಲಾಗಿದೆ ಎಂದರು.

ಸಭೆಯಲ್ಲಿ ಸಮಿತಿ ಉಪಾಧ್ಯಕ್ಷ ಸುರೇಶ ರಾಯಬಾಗಿ, ಕಾರ್ಯದರ್ಶಿ ಶಿವಾನಂದ ಇಟಗಿ, ಆನಂದ ಕುಲಕರ್ಣಿ, ಮಂಜುನಾಥ ಹೆಗಡೆ ಹಾಗೂ ಮೌನೇಶ ಹೊಸಮನಿ ಸೇರಿದಂತೆ ಸಮಿತಿ ಸದಸ್ಯರು ಉಪಸ್ಥಿತರಿದ್ದರು. ಉಮೇಶಗೌಡ ಪಾಟೀಲ ಸ್ವಾಗತಿಸಿ ನಿರೂಪಿಸಿದರು. ವಿರೇಶ ಅಂಗಡಿ ವಂದಿಸಿದರು.

> ಸಮಿತಿ ಮಹಿಳಾ ಘಟಕದ ಉಪಾಧ್ಯಕ್ಷೆ ಜೋತಿ ಪಾಯಪ್ಪಗೌಡ್ರ ಮಾತನಾಡಿ, ಸಂಜೆ ಸಮಾರಂಭದಲ್ಲಿ ಧರ್ಮ ಜಾಗರಣ ಪ್ರಾಂತ ಕಾರ್ಯಕಾರಿಣಿ ಸದಸ್ಯರಾದ ವಕ್ತಾರ ದೀಲಿಪ್ ವೆರ್ಣೇಕರ ಹಿಂದೂ ಧರ್ಮ ಜಾಗೃತಿ ಕುರಿತು ಮಾತನಾಡಲಿದ್ದು, ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ ಎಂದರು.

## ಮಡಿವಾಳ ಮಾಚಿದೇವ ಜಯಂತಿ ಪೂರ್ವಸಿದ್ಧತಾ ಸಭೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಡಿವಾಳ ಮಾಚಿದೇವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು ಪೂರ್ವಸಿದ್ಧತಾ ಸಭೆಯು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಮಡಿವಾಳ ಮಾಚಿದೇವರ ಜಯಂತಿಯನ್ನು ಫೆಬ್ರವರಿ 2ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ತಾಲೂಕು ಮಟ್ಟದಲ್ಲಿಯೂ ಮಡಿವಾಳ ಮಾಚಿದೇವರ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸುವ ಕುರಿತು ಸಭೆ ಜರುಗಿಸಲು ಸೂಚಿಸಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ, ಸರ್ಕಾರಿ ಕಚೇರಿಗಳಲ್ಲಿ, ಶಾಲೆ–ಕಾಲೇಜುಗಳಲ್ಲಿ ಮಡಿವಾಳ ಮಾಚಿದೇವರ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಕಾರ್ಯಕ್ರಮದ ದಿನದಂದು ಸನ್ಮಾನಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಗಣ್ಯರು, ಪ್ರಮುಖರು, ಹಿರಿಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು.

## ಸದೃಢ ಮಕ್ಕಳಿಂದ ಭವ್ಯ ಭಾರತ ನಿರ್ಮಾಣ



**■ವಿಜಯಸಾಕ್ಷಿ ಸುದ್ದಿ, ಗದಗ**

ಕ್ರೀಡೆ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿದೆ. ಸದೃಢ ಮಕ್ಕಳಿಂದ ಭವ್ಯ ಭಾರತದ ನಿರ್ಮಾಣ ಸಾಧ್ಯ ಎಂದು ಗದಗ ಕನಕದಾಸ ಶಿಕ್ಷಣ ಸಮಿತಿ ಮುಖ್ಯಸ್ಥರು ಹಾಗೂ ಗದಗ ಜಿ.ಪಂ ಮಾಜಿ ಅಧ್ಯಕ್ಷರಾದ ಶಕುಂತಲಾ ಬಿ.ದಂಡಿನ ನುಡಿದರು.

ಕೆವಿಎಸ್‌ಆರ್ ಪ್ರೌಢಶಾಲೆಯಲ್ಲಿ ಜರುಗಿದ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಯೋಧ ಶ್ರೀಶೈಲಪ್ಪ ಬಿ.ತೊಮ್ಮರಮಟ್ಟಿ, ಸಂಗಯ್ಯ ಕ.ಹಿರೇಮಠ ಗೌರವ ಸನ್ಮಾನ ಸ್ವೀಕರಿಸಿ ಮಾತನಾಡುತ್ತ, ಮಕ್ಕಳಿಗೆ ಇಂದು ಗುಣಾತ್ಮಕ ಶಿಕ್ಷಣದೊಂದಿಗೆ ಮೌಲ್ಯ ಮತ್ತು ಕ್ರೀಡಾ ಶಿಕ್ಷಣ ಅವಶ್ಯ. ಸದೃಢ ಭಾರತ ನಿರ್ಮಾಣಕ್ಕಾಗಿ ಸದೃಢ ಮಕ್ಕಳ ನಿರ್ಮಾಣ ಇಂತಹ ಶಾಲೆಗಳಲ್ಲಿ ಮಾತ್ರ ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸಂಕೇತ ದಂಡಿನ, ಮುಖ್ಯ ಶಿಕ್ಷಕಿ ಪಿ.ಟಿ. ಬಿಸನಳ್ಳಿ, ಪ್ರೊ. ದೊಡ್ಡಮನಿ, ರಾಮು, ಶಿಕ್ಷಕರಾದ ಎಂ.ಕೆ. ಬೇವಿನಕಟ್ಟಿ, ಎಸ್. ಎಸ್. ಮುಧೋಳ, ದೀಪಾ ಎಂ, ದೈಹಿಕ ಶಿಕ್ಷಕ ಎಸ್.ಕೆ. ಬಸಾಪುರ, ಶಾಲಾ ಸಿಬ್ಬಂದಿ ಬಿ.ಎನ್. ಕಮ್ಮಾರ, ಆಯ್.ಎಂ. ಕುರ್ತಕೋಟಿ ಉಪಸ್ಥಿತರಿದ್ದರು. ಎಂ.ಕೆ. ಬೇವಿನಕಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

# ಸಂಸದ ಕ್ರೀಡಾ ಮಹೋತ್ಸವ–2026

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಪ್ರಸ್ತುತಪಡಿಸುವ 'ಹಾವೇರಿ ಸಂಸದ ಕ್ರೀಡಾ ಮಹೋತ್ಸವ 2025–26'ನ್ನು ಗ್ರಾಮೀಣ ಪ್ರದೇಶದ ಯುವಜನತೆಯನ್ನು ಕ್ರೀಡೆಗಳಲ್ಲಿ ಆಸಕ್ತಿ ಮೂಡಿಸಲು ಹಾಗೂ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ಹಾಗೂ ಪ್ರತಿ ಸಂಸದರು ತಮ್ಮ ಲೋಕಸಭಾ ವ್ಯಾಪ್ತಿಯಲ್ಲಿನ ಮಕ್ಕಳಿಗೆ ಮತ್ತು ಯುವಜನತೆಗೆ ಕ್ರೀಡೆಗಳಲ್ಲಿ ಪ್ರೋತ್ಸಾಹ ನೀಡಬೇಕೆಂಬ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಲೋಕಸಭಾ ವ್ಯಾಪ್ತಿಯಲ್ಲಿ ಸಂಸದ ಕ್ರೀಡಾ ಮಹೋತ್ಸವವನ್ನು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಘಟಿಸಲು ಸೂಚಿಸಿದೆ.

ಸಂಸದ ಕ್ರೀಡಾ ಮಹೋತ್ಸವವನ್ನು ತಾಲೂಕು ಮಟ್ಟದಲ್ಲಿ ಗದಗ ಜಿಲ್ಲೆಯ 7 ತಾಲೂಕುಗಳಲ್ಲಿ ಆಯೋಜಿಸಲಾಗುತ್ತಿದ್ದು, ಗದಗ ತಾಲೂಕಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ರೋಣ ತಾಲೂಕಿನಲ್ಲಿ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣ, ಶಿರಹಟ್ಟಿ ತಾಲೂಕಿನಲ್ಲಿ ಎಫ್.ಎಂ. ಡಬಾಲಿ ತಾಲೂಕ ಕ್ರೀಡಾಂಗಣ, ಮುಂಡರಗಿ ತಾಲೂಕಿನಲ್ಲಿ ಅನ್ನದಾನೀಶ್ವರ ತಾಲೂಕು ಕ್ರೀಡಾಂಗಣ, ನರಗುಂದ ತಾಲೂಕಿನಲ್ಲಿ ತಾಲೂಕು ಕ್ರೀಡಾಂಗಣ, ಲಕ್ಷ್ಮೇಶ್ವರದಲ್ಲಿ ಉಮಾ ಮಹಾವಿದ್ಯಾಲಯ ಮೈದಾನ ಮತ್ತು ಗಜೇಂದ್ರಗಡ ತಾಲೂಕಿನಲ್ಲಿ ಎಸ್.ಎಂ. ಭೂಮರೆಡ್ಡಿ ಶಿಕ್ಷಣ ಸಂಸ್ಥೆಯ ಮೈದಾನದಲ್ಲಿ ತಾಲೂಕು ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ.

ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್ ಆಟಗಳಾದ 100 ಮೀಟರ್ ಓಟ, 400 ಮೀಟರ್ ಓಟ, ಗುಂಡು ಎಸೆತ, ಉದ್ದ ಜಿಗಿತ, 4*100 ಮೀಟರ್ ರಿಲೇ ವಯಕ್ತಿಕ ಕ್ರೀಡೆಗಳನ್ನು ಹಾಗೂ ಗುಂಪು ಆಟಗಳಾದ ವಾಲಿಬಾಲ್, ಖೋ–ಖೋ, ಕಬಡ್ಡಿ, ಮಲ್ಲಕಂಬ (ಜಿಲ್ಲಾ ಮಟ್ಟದಲ್ಲಿ ಮಾತ್ರ) ಆಟಗಳನ್ನು 17ರಿಂದ 25 ವಯೋಮಿತಿಯ ಬಾಲಕ/ಬಾಲಕಿಯರಿಗೆ ಪ್ರತ್ಯೇಕವಾಗಿ ಆಯೋಜಿಸಲಾಗಿದೆ. ಸಂಸದ ಕ್ರೀಡಾ ಮಹೋತ್ಸವದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಕಡ್ಡಾಯವಾಗಿ bommai.basavaraj@ sansad.nic.inJsmDVhcQvJ https://sansadkhelmahot-sav.in/ ಲಿಂಕ್ ಮುಖಾಂತರ, ಕೆಳಕಾಣಿಸಿದ ಕ್ಯೂಆರ್ ಕೋಡ್ ಬಳಸಿ ಜನವರಿ 28ರೊಳಗಾಗಿ ಹೆಸರನ್ನು ನೋಂದಾಯಿಸಿ ಭಾಗಹಿಸುವುದು ಕಡ್ಡಾಯವಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಸಹಕಾರ ತರಬೇತಿ ಶಿಬಿರ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರ ಜ. 22ರಂದು ಬೆಳಿಗ್ಗೆ 10 ಗಂಟೆಗ್ಗೆದುಗಿನ ದಿ ಚೇಂಬರ್ ಆಫ್ ಕಾಮರ್ಸ್ ಸಭಾಭವನದಲ್ಲಿ ಜರುಗಲಿದೆ.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಅಧ್ಯಕ್ಷರಾದ ಸಿ.ಎಂ. ಪಾಟೀಲ ವಹಿಸುವರು. ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶ ಎಚ್.ಜಿ. ಹಿರೇಗೌಡ್ರ ಕಾರ್ಯಕ್ರಮ ಉದ್ಘಾಟಿಸುವರು. ಧಾರವಾಡ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ, ಹಾಲಿ ನಿರ್ದೇಶಕ ನೀಲಕಂಠ ಅಸೂಟಿ ಸಹಕಾರಿ ಪಿತಾಮಹರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ಲಿಂಗರಾಜಗೌಡ ಎಚ್.ಪಾಟೀಲ ಒಕ್ಕೂಟದ ಸೌಲಭ್ಯಗಳ ಚೆಕ್ ವಿತರಣೆ ನೆರವೇರಿಸುವರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕರಾದ ಅನಿತಾ ಎ.ಕಲ್ಲನ್ನವರ, ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಉಪನಿರ್ದೇಶಕ ಹೆಚ್.ಮಂಜಪ್ಪ, ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಪುಷ್ಪಾ ಕೆ.ಕಡಿವಾಳ, ಶಿರಹಟ್ಟಿ, ಮುಂಡರಗಿ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕರಿಗಳಾದ ಕೆ.ಸಿ. ಕೂಸನೂರಮಠ, ಚಂದ್ರಶೇಖರ ಲಮಾಣಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ ಗದಗ ಇದರ ಮಾರಾಟಾಧಿಕಾರಿಗಳಾದ ಬಿ.ಆರ್. ನಿಡಗುಂದಿ, ರೋಣ, ನರಗುಂದ, ಗದಗ ತಾಲೂಕುಗಳ ಸಹಕಾರ ಅಭಿವೃದ್ಧಿ ಅಧಿಕರಿಗಳಾದ ಪ್ರಶಾಂತ ಮುಧೋಳ, ಪ್ರಕಾಶ ನವಲಗುಂದ, ಎಚ್.ಎಂ. ಶಾಂತಾ, ಧಾರವಾಡ ಹಾಲು ಒಕ್ಕೂಟದ ಗದಗ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ್ ಎಸ್.ಪಟ್ಟೇದ, ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಡಾ. ಪ್ರಜ್ಞಾ ಮತ್ತಿಹಳ್ಳಿ, ಪದ್ಮಾವತಿ ಜಿ, ಡಾ. ಮಲ್ಲೂರ ಬಸವರಾಜ ಎನ್, ಆರ್.ಎಚ್. ನಾಯಕ ಉಪನ್ಯಾಸ ನೀಡುವರು ಎಂದು ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ತಿಳಿಸಿದ್ದಾರೆ.

ನೂತನ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಉದ್ಘಾಟನೆ, ಸಾಂಘಿಕ ಚಟುವಟಿಕೆಗಳ ಸಮಾರೋಪ

# ಶಿಸ್ತು, ಪರಿಶ್ರಮದಿಂದ ಸಾಧನೆ ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಕ್ಕಳು ಸಾಧನೆ ಮಾಡುವ ಆಸಕ್ತಿ ಹಾಗೂ ಇಚ್ಛಾಶಕ್ತಿಯಿಂದ ಕಲಿತರೆ ಎಲ್ಲಾ ಪಾಠಗಳನ್ನು ಸರಳವಾಗಿ ಗ್ರಹಿಸಿಕೊಳ್ಳಲು ಸಾಧ್ಯವಾಗುತ್ತದೆ. ಶಿಸ್ತು ಮತ್ತು ಪರಿಶ್ರಮದಿಂದ ಸಾಧನೆ ಮಾಡಬಹುದಾಗಿದೆ ಎಂದು ಗದಗ ಜಿಲ್ಲಾ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ ಹೇಳಿದರು.

ಗಜೇಂದ್ರಗಡ ನಗರದ ಪುರ್ತಗೇರಿ ಕ್ರಾಸ್ ಬಳಿ ಇರುವ ಶ್ರೀ ಅನ್ನದಾನೇಶ್ವರ ವಾಣಿಜ್ಯ ಮತ್ತು ವಿಜ್ಞಾನ ಪದವಿಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಬುಧವಾರ ನಡೆದ ನೂತನ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಉದ್ಘಾಟನೆ, ವಿವಿಧ ಸಾಂಘಿಕ ಚಟುವಟಿಕೆಗಳ ಸಮಾರೋಪ ಹಾಗೂ ದ್ವಿತೀಯ ಪಿಯು ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯವಾದದ್ದು. ವೈಯಕ್ತಿಕ ಬೆಳವಣಿಗೆ ಮಾತ್ರವಲ್ಲದೆ ಸಮಾಜ ಮತ್ತು ದೇಶದ ಪ್ರಗತಿ ಬಗ್ಗೆಯೂ ವಿದ್ಯಾರ್ಥಿ, ಯುವಜನರಿಗೆ ಜವಾಬ್ದಾರಿ ಇರಬೇಕು. ಓದುವ ಸಮಯದಲ್ಲಿ ಕಾಲಹರಣ ಮಾಡಿದರೆ ಕಷ್ಟ, ನೋವು ಕಟ್ಟಿಟ್ಟ ಬುತ್ತಿ ಎಂಬುದನ್ನು ಮರೆಯಬಾರದು. ನೈತಿಕ ಮಾರ್ಗದಲ್ಲಿ ನಡೆದು ಗುರಿ ಸಾಧನೆ ಮಾಡಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಚೇರಮನ್ ವೀರಯ್ಯ ವಿ.ವಸ್ತ್ರದ, ವ್ಯಾಸಂಗದ ಅವಧಿಯಲ್ಲಿ ವಿದ್ಯಾರ್ಥಿಗಳು ಶಿಸ್ತು, ಸಂಯಮ ಮತ್ತು ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಅಭ್ಯಾಸದ ಜೊತೆಗೆ ಮಕ್ಕಳ ಆರೋಗ್ಯಕ್ಕೆ ಹಾಗೂ ನೈತಿಕತೆಗೆ ಪಾಲಕರು, ಶಿಕ್ಷಕರು ಕಾಳಜಿ ವಹಿಸಬೇಕು. ಮಾನವನ ಬದುಕಿನಲ್ಲಿ ಸಮಯ ಕೋಟಿ ಕೊಟ್ಟರೂ ಸಿಗದು. ಹೀಗಾಗಿ ಪರೀಕ್ಷೆಗೆ ತಯಾರಿ ನಡೆಸಿರುವ ವಿದ್ಯಾರ್ಥಿಗಳು ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಅಂದಾಗ ಮಾತ್ರ ದೇಶ ಮೆಚ್ಚುವಂತಹ ಸಾಧನೆಗೈಲು ಸಾಧ್ಯ. ಜೀವನದಲ್ಲಿ ಎಲ್ಲರೂ ಯಶಸ್ಸಿನ ಕನಸು ಕಾಣುತ್ತಾರೆ. ಅದಕ್ಕೆ ತಕ್ಕುದಾದ ತಯಾರಿ ಮಾಡುವುದಿಲ್ಲ. ಅದನ್ನು ನೀವು ಮಾಡಬೇಕು ಎಂದು ಸಲಹೆ ನೀಡಿದರು.

ಆರಂಭದಲ್ಲಿ ನೂತನ ಪ್ರಾಯೋಗಿಕ ಕೇಂದ್ರದ ಉದ್ಘಾಟನೆ ನೆರವೇರಿತು. ನಂತರ ದಾನಿಗಳ, ಗಣ್ಯರ ಸನ್ಮಾನ ಜರುಗಿತು.

ಪ್ರಸ್ತುತ ಸಮಾಜಕ್ಕೆ ವಿಜ್ಞಾನದ ಕೊಡುಗೆ ಕುರಿತು ಉಪನ್ಯಾಸ ನೀಡಿದ ಶಿವಾನಂದ ಕಲ್ಲೂರ ಮಾತನಾಡಿ, ವಿಜ್ಞಾನ ಕಠಿಣವಾಗಿದ್ದು, ಅರ್ಥ ಮಾಡಿಕೊಳ್ಳುವುದು ಕಷ್ಟಸಾಧ್ಯ ಎನ್ನುವ ಅಭಿಪ್ರಾಯ ಹಲವರಲ್ಲಿದೆ. ಆದರೆ ವಿಜ್ಞಾನವನ್ನು ಎಲ್ಲರೂ ಓದಬಹುದಾಗಿದ್ದು, ಸುಲಭವಾಗಿ ಅರ್ಥ ಮಾಡಿಕೊಳ್ಳಬಹುದಾಗಿದೆ.

ನನ್ನಿಂದ ಕಷ್ಟ ಎನ್ನುವ ಭಾವನೆಯಿಂದ ಹೊರಬಂದು ಇಷ್ಟಪಟ್ಟಾಗ ಮನನ ಸಾಧ್ಯವಿದೆ. ಯಾವುದೇ ವಿಷಯಗಳ ಮೂಲ ಪರಿಕಲ್ಪನೆ ಅರ್ಥವಾಗದಿದ್ದಾಗ ಅದು ಕಠಿಣ ಅನ್ನಿಸುತ್ತದೆ.


ಹೀಗಾಗಿ ಮೂಲ ಪರಿಕಲ್ಪನೆ ಮೊದಲಿಗೆ ಅರ್ಥೈಸಿಕೊಳ್ಳಬೇಕಿದೆ. ಜಗತ್ತಿನಲ್ಲಿಯಾವುದೇ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶ ಗಳಿಸಬೇಕಾದರೆ ವಿಜ್ಞಾನವನ್ನು ತಿಳಿದುಕೊಳ್ಳುವ ಅಗತ್ಯವಿದೆ ಎಂದರು.

ಸಭಾ ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಎಸ್‌ಎವಿವಿಪಿಯ ಶೈಕ್ಷಣಿಕ ಸಲಹೆಗಾರ ಬಿ.ಎಸ್. ಗೌಡರ, ಗಜೇಂದ್ರಗಡ ಅಂಗಸಂಸ್ಥೆಯ ಶೈಕ್ಷಣಿಕ ಸಲಹೆಗಾರ ಶಿವಾನಂದ ಮಠದ, ಎಸ್‌ಎಪಿಯು ಕಾಲೇಜ್ ನರೇಗಲ್‌ನ ಚೇರಮನ್ ಎಂ.ಜಿ. ಸೋಮನಕಟ್ಟಿ, ಆಡಳಿತ ಮಂಡಳಿ ಸದಸ್ಯ ಎಂ.ಪಿ. ಪಾಟೀಲ, ಅನ್ನದಾನೇಶ್ವರ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ಚೇರಮನ್ ಪಿ.ಎನ್. ಚವಡಿ, ಕುಮಾರೇಶ್ವರ ಪದವಿ ಕಾಲೇಜಿನ ಚೇರಮನ್ ವೀರಣ್ಣ ಶೆಟ್ಟರ, ಪ್ರಗತಿಪರ ರೈತ ದೇವೇಂದ್ರಪ್ಪ ಬಳೂಟಗಿ, ಸಮಾಜ ಸೇವಕ ರಾಜು ಸಾಂಗ್ಲಿಕರ, ವಕೀಲ ರಫೀಕ ತೋರಗಲ್ಲ, ಗಜೇಂದ್ರಗಡ ತಾಲೂಕು ಕಾನಿಪ ಅಧ್ಯಕ್ಷ ಮಂಜುನಾಥ ಎಸ್.ರಾಠೋಡ, ಗದಗ ಜಿಲ್ಲಾ ಕಾನಿಪ ಕಾರ್ಯಕಾರಿಣಿ ಸದಸ್ಯ ಶಿವಕುಮಾರ ಶಶಿಮಠ, ಎ.ಕೆ. ಒಂಟಿ, ಪ್ರಾಚಾರ್ಯರಾದ ವಸಂತರಾವ್ ಗಾರಗಿ, ಬಸಯ್ಯ ಹಿರೇಮಠ, ಎ.ಪಿ. ಗಾಣಗೇರ, ಪ್ರಾಥಮಿಕ ವಿಭಾಗದ ಮುಖ್ಯ ಶಿಕ್ಷಕ ಮಂಜುನಾಥ ಕಾಡದ ಇದ್ದರು.

35ನೇ ವರ್ಷದ ಪೀಠಾರೋಹಣ ವರ್ಧಂತಿ ಮಹೋತ್ಸವ ಧರ್ಮ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಮಾನವೀಯ ಸಂಬಂಧಗಳನ್ನು ಬೆಳೆಸುವ ಶಕ್ತಿ ಧರ್ಮಕ್ಕಿದೆ




■ವಿಜಯಸಾಕ್ಷಿ ಸುದ್ದಿ, ಭಾಲ್ಕಿ

ಮಾನವನ ಬದುಕು ಸಂಪತ್ತಿನಿಂದ ಕೂಡಿದ್ದರೂ ಶಾಂತಿ ಇಲ್ಲದಂತಾಗಿದೆ. ಸಿರಿ ಸಂಪದ ಗಳಿಸಲು, ಉಳಿಸಲು ಬೇಕಾದಷ್ಟು ಸಮಯವಿದೆ. ಆದರೆ ಆಧ್ಯಾತ್ಮ ಸಾಧನೆಗೆ ಮತ್ತು ಭಗವಂತನ ಸ್ಮರಣೆಗೆ ಮಾತ್ರ ಸಮಯ ಇಲ್ಲದಂತಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಮೇಹಕರ ಕಟ್ಟಿಮನಿ ಹಿರೇಮಠದ ಸಭಾಂಗಣದಲ್ಲಿ ತಮ್ಮ 35ನೇ ವರ್ಷದ ಪೀಠಾರೋಹಣ ವರ್ಧಂತಿ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭೌತಿಕ ಜೀವನ ಸಮೃದ್ಧಗೊಂಡರೆ ಸಾಲದು. ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕಾಗಿದೆ. ಸತ್ಯ ಸುಂದರ, ಸಂಸ್ಕೃತಿಯ ಅರಿವಿನಿಂದ ಮನುಷ್ಯನ ಬದುಕು ಬಲಗೊಳ್ಳಬೇಕು. ಸಕಲ ಜೀವಾತ್ಮರಿಗೂ ಒಳಿತನ್ನು ಬಯಸಿದ ವೀರಶೈವ ಧರ್ಮ ಉಗಮ, ಉತ್ಥಾನ, ಪುನರುತ್ಥಾನ ಮತ್ತು ಜಾಗೃತಿ ಎಂದು ನಾಲ್ಕು ಹಂತಗಳಲ್ಲಿ ಬೆಳೆದು ಬಂದಿರುವುದನ್ನು ಮರೆಯಬಾರದು. ಮಾನವೀಯ ಸಂಬಂಧಗಳನ್ನು ಬೆಳೆಸುವ ಶಕ್ತಿ ಧರ್ಮಕ್ಕಿದೆ ಹೊರತು ಬೇರಾವುದಕ್ಕೂ ಇಲ್ಲವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಪೀಠಾರೋಹಣದ 34 ಸಂವತ್ಸರಗಳಲ್ಲಿ ಹಲವಾರು ರಚನಾತ್ಮಕ ಮತ್ತು ಗುಣಾತ್ಮಕ ಕಾರ್ಯಗಳನ್ನು ಕೈಗೊಂಡಿರುವುದು ತಮಗೆ ತೃಪ್ತಿ ತಂದಿದೆ ಎಂದರು.

ನೇತೃತ್ವ ವಹಿಸಿದ ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಬೆಂಕಿಯಲ್ಲಿ ಸುಡುತ್ತಿದ್ದರೂ ಚಿನ್ನ ಕಪ್ಪಾಗದೇ ಹೊಳೆಯುತ್ತದೆ. ಸತ್ಪುರುಷರ ಬಾಳು ಸಹ ಹಾಗೆಯೇ. ಒಳ್ಳೆಯವರನ್ನು ನಿಂದಿಸುವವರು ಆಗಸಕ್ಕೆ ಉಗುಳಿದಂತೆ ನಿಷ್ಫಲವಾಗುತ್ತದೆ. ಅರ್ಥವಿಲ್ಲದ ಬದುಕು, ಆಚರಣೆ ಇಲ್ಲದ ಜೀವನ, ಹೃದಯ ಸಾಮರಸ್ಯ ಇಲ್ಲದ ನಡೆ ಮನುಷ್ಯನಲ್ಲಿ ಇರಬಾರದು. ಶ್ರೀ ರಂಭಾಪುರಿ ಜಗದ್ಗುರುಗಳು ಭಾವ ಶ್ರೀಮಂತಿಕೆ ಹೊಂದಿ ಧರ್ಮ ಸಂಸ್ಕೃತಿಯ ಪುನರುತ್ಥಾನಕ್ಕೆ ಸದಾ ಶ್ರಮಿಸುತ್ತಾ ಬಂದಿದ್ದಾರೆ ಎಂದರು.

ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಜ್ಯೋತಿ ಬೆಳಗಿಸಿ ಧರ್ಮ ಸಮಾರಂಭ ಉದ್ಘಾಟಿಸಿದರು. ಸಮಾರಂಭದಲ್ಲಿ ಶ್ರೀನಿವಾಸ ಸರಡಗಿಯ ರೇವಣಸಿದ್ಧೇಶ್ವರ ಶಿವಾಚಾರ್ಯರು, ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು, ಚಳಗೇರಿ ವೀರಸಂಗಮೇಶ್ವರ ಶಿವಾಚಾರ್ಯರು, ಹಲಬುರ್ಗಾ ಹಾವಗಿ ಲಿಂಗೇಶ್ವರ ಶಿವಾಚಾರ್ಯರು, ಮಾದನ ಹಿಪ್ಪರಗಿ ಶಾಂತವೀರ ಶಿವಾಚಾರ್ಯರು, ಆಲಮೇಲ ಚಂದ್ರಶೇಖರ ಶಿವಾಚಾರ್ಯರು, ಮಳಲಿಮಠದ ಡಾ. ಗುರುನಾಗಭೂಷಣ ಶಿವಾಚಾರ್ಯರು, ಕನ್ನೂರು-ಸಿಂಧನೂರು ಸೋಮನಾಥ ಶಿವಾಚಾರ್ಯರು, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಹಳ್ಳಿಖೇಡ ಶ್ರೀಪತಿ ಪಂಡಿತಾರಾಧ್ಯ ಶಿವಾಚಾರ್ಯರು, ರಾಜೇಶ್ವರ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಸದಲಗಾ ಸಿದ್ಧಲಿಂಗ ಶಿವಾಚಾರ್ಯರು, ಹಿರೇನಾಗಾಂವ ಗುರುಶಾಂತೇಶ್ವರ ಸ್ವಾಮೀಜಿ, ಹುಡುಗಿ ವಿರಕ್ತಮಠದ ಶ್ರೀಗಳು ಸೇರಿದಂತೆ 25ಕ್ಕೂ ಹೆಚ್ಚು ಮಠಾಧೀಶರು ಪಾಲ್ಗೊಂಡು ಜಗದ್ಗುರುಗಳಿಗೆ ಗೌರವ ಸಲ್ಲಿಸಿದರು.

ಬೀದರಿನ ಬಿ.ಎಸ್. ಕುದುರೆ ಇವರಿಗೆ ಸಹಕಾರಿ ರತ್ನ ಪ್ರಶಸ್ತಿ, ಗಣಪತರಾವ್ ಖೂಬಾ ಇವರಿಗೆ ಸಾಧನಾ ಸಹ್ಯಾದ್ರಿ ಪ್ರಶಸ್ತಿ, ಶಿವಶರಣಪ್ಪ ವಾಲಿ ಇವರಿಗೆ ಸುದ್ದಿ ಸುಧಾಕರ ಪ್ರಶಸ್ತಿ, ಜಮೀರಾಬಾದನ ಅಲ್ಲಾಡಿ ವೀರೇಶಂ ಇವರಿಗೆ ದಾನ ವಿಶಾರದ ಪ್ರಶಸ್ತಿ, ಕಲಬುರ್ಗಿ ಶಿವಶರಣಪ್ಪ ಸಿರಿ ಇವರಿಗೆ ಗುರುಭಕ್ತಿ ಶಿರೋಮಣಿ ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು.

# ಬಿಜೆಪಿ ಮಂಡಳ ಪ್ರಧಾನ ಕಾರ್ಯದರ್ಶಿಯಾಗಿ ಗಂಗಾಧರ ಮೆಣಸಿನಕಾಯಿ ನೇಮಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯ ಜನತಾ ಪಾರ್ಟಿಯ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಶಿರಹಟ್ಟಿ ಮಂಡಲದ ಪ್ರಧಾನ ಕಾರ್ಯದರ್ಶಿಯಾಗಿ ಬಿಜೆಪಿ ಪಕ್ಷದ ಯುವ ಮುಖಂಡ ಗಂಗಾಧರ ಮೆಣಸಿನಕಾಯಿ ನೇಮಕಗೊಂಡಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆದೇಶದಂತೆ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರಡಗಿ ನೇಮಕ ಮಾಡಿದ್ದಾರೆ.



ಈ ಕುರಿತು ಪ್ರತಿಕ್ರಿಯಿಸಿದ ಶಾಸಕ ಡಾ. ಚಂದ್ರು ಲಮಾಣಿ, ಗಂಗಾಧರ ಮೆಣಸಿನಕಾಯಿ ಅವರು ಕಳೆದ ಹತ್ತಾರು ವರ್ಷಗಳಿಂದ ಪಕ್ಷದ ಕಾರ್ಯಕರ್ತನಾಗಿ, ನಗರ, ತಾಲೂಕಾ ಘಟಕಗಳ ಪದಾಧಿಕಾರಿಯಾಗಿ ಪಕ್ಷದ ಸಂಘಟನೆಯ ಕಾರ್ಯದಲ್ಲಿ ಸಕ್ರಿಯರಾಗಿದ್ದಾರೆ. ಪಕ್ಷದ ಕಾರ್ಯ ಚಟುವಟಿಕೆಗಳನ್ನು ಅತ್ಯಂತ ಯಶಸ್ವಿಯಾಗಿ ನಿರ್ವಹಿಸುವ ಮೂಲಕ ಎಲ್ಲರ ವಿಶ್ವಾಸ ಗಳಿಸಿದ್ದಾರೆ. ಮಂಡಳದ ಪ್ರ. ಕಾರ್ಯದರ್ಶಿಯಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಶ್ರೀ ವೀರಪ್ಪಜ್ಜನ ಪುರಾಣ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿದ ಅಭಿನವ ಚನ್ನಬಸವ ಸ್ವಾಮೀಜಿ

# ವೀರಪ್ಪಜ್ಜನ ವಾಣಿ ಸದಾ ಪ್ರಸ್ತುತ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

'ಯಾವುದು ಹೌದು ಅದು ಅಲ್ಲ, ಯಾವುದು ಅಲ್ಲ ಅದು ಹೌದು' ಎಂಬ ದಿವ್ಯವಾಣಿಯು ಸದಾಕಾಲಕ್ಕೂ ಪ್ರಸ್ತುತವಾದುದು ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು.

ಸಮೀಪದ ಕೋಡಿಕೊಪ್ಪ ಗ್ರಾಮದಲ್ಲಿ ಹಠಯೋಗಿ ವೀರಪ್ಪಜ್ಜನ ಜಾತ್ರಾ ಮಹೋತ್ಸವದ ಅಂಗವಾಗಿ ಮಂಗಳವಾರ ಪುರಾಣ ಪ್ರಾರಭೋತ್ಸವದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಯಾವುದು ಹೌದು ಅದು ಅಲ್ಲ, ಯಾವುದು ಅಲ್ಲ ಅದು ಹೌದು ಎಂಬುದು ಜೀವನದ ವಿರೋಧಾಭಾಸಗಳನ್ನು, ಭ್ರಮೆಗಳನ್ನು ಮತ್ತು ಅರಿವಿನ ಅನಿಶ್ಚಿತತೆಯನ್ನು ಸೂಚಿಸುವ ಒಂದು ಆಳವಾದ ತತ್ವವಾಗಿದೆ. ಇದನ್ನು ಅನೇಕರು ಆಧ್ಯಾತ್ಮಿಕ ಸಂದೇಶ ಅಥವಾ ಜಗತ್ತನ್ನು ಬೇರೆ ದೃಷ್ಟಿಕೋನದಿಂದ ನೋಡಲು ಪ್ರೇರೇಪಿಸುವ ಒಗಟು ಎಂದು ವ್ಯಾಖ್ಯಾನಿಸುತ್ತಾರೆ. ಅಂದರೆ, ನಾವು ಸತ್ಯವೆಂದು ಭಾವಿಸುವುದು ಸುಳ್ಳಾಗಬಹುದು ಮತ್ತು ಸುಳ್ಳು ಎಂದುಕೊಂಡಿರುವುದು ಸತ್ಯವಾಗಿರಬಹುದು. ಲೌಕಿಕ ಜಗತ್ತಿನಲ್ಲಿ ಹೌದು ಎಂದು ಕಾಣುವ ಅನೇಕ ವಿಷಯಗಳಾದ ಸಂಪತ್ತು, ಸಂಬಂಧಗಳು, ಖ್ಯಾತಿಗಳು ಆಧ್ಯಾತ್ಮಿಕ ಪಯಣದಲ್ಲಿ ಗೌಣ ಅಥವಾ ಭ್ರಮೆಗಳಾಗಿವೆ. ಅಲ್ಲ ಎಂದು ತೋರುವ ತ್ಯಾಗ, ಸರಳತೆ ವಿಷಯಗಳು ನಿಜವಾದ ಸತ್ಯವಾಗಿರಬಹುದು. ನೀವು ಯಾವುದನ್ನು ನಿಜವೆಂದು ನಂಬುತ್ತೀರೋ, ಅದು ಮತ್ತೊಬ್ಬರಿಗೆ ಸುಳ್ಳಾಗಬಹುದು. ಯಾವುದನ್ನು ನೀವು ಸುಳ್ಳೆಂದು ತಳ್ಳಿಹಾಕುತ್ತೀರೋ, ಅದರಲ್ಲಿ ನಿಜವಿರಬಹುದು. ಈ ಮಾತು ಜೀವನದ ಅನಿಶ್ಚಿತತೆ ಮತ್ತು ನಮ್ಮ ಗ್ರಹಿಕೆಯ ಮಿತಿಗಳನ್ನು ಎತ್ತಿ ತೋರಿಸುತ್ತದೆ. ಅದು ನಮ್ಮನ್ನು ಪ್ರಶ್ನಿಸಲು ಮತ್ತು ವಿಷಯಗಳನ್ನು ಬೇರೆ ದೃಷ್ಟಿಕೋನದಿಂದ ನೋಡಲು ಪ್ರೇರೇಪಿಸುತ್ತದೆ ಎಂದರು.

ವೀರಯ್ಯ ಶಾಸ್ತ್ರಿ ಚರಂತಿಮಠ ಪ್ರವಚನ ನೀಡಿದರು. ಚಂದ್ರಯ್ಯ ಹಿರೇಮಠ, ರಾಚಯ್ಯ ಗುರುಮಠ ಸಂಗೀತ ಸೇವೆ ನೀಡಿದರು. ಮಹಾಲಿಂಗಯ್ಯ ಹಿರೇವಡೇಯರ, ಮಲ್ಲೇಶಯ್ಯ ಹಿರೇಮಠ, ಕುಬೇರಪ್ಪ ನಾಶಿಪುಡಿ, ವಿರೂಪಾಕ್ಷಗೌಡ ಹಿರೇವಡೇಯರ ಸೇರಿದಂತೆ ಇತರರಿದ್ದರು. ಬಸವರಾಜ ನಾಶಿಪುಡಿ ನಿರ್ವಹಿಸಿದರು.

# ಶರಣ ಸಾಹಿತ್ಯಗಳು ಶ್ರೇಷ್ಠ ಚಿಂತನೆಗಳು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಸವಾದಿ ಶರಣರು, ಸಂತರು ತಮ್ಮದೇ ಆದ ಸಾಹಿತ್ಯದ ಮೂಲಕ ಸಾರಿದ ಜೀವನ ಮೌಲ್ಯಗಳು ಸಾರ್ವಕಾಲಿಕ ಶ್ರೇಷ್ಠ ಚಿಂತನೆಗಳಾಗಿವೆ ಎಂದು ಮಾಜಿ ಸಂಸದ ಐ.ಜಿ. ಸನದಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಆಶ್ರಯದಲ್ಲಿ ನಡೆದ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶರಣರ ಚಿಂತನೆಗಳು ಇಡೀ ಮನುಕುಲಕ್ಕೆ ದಾರಿದೀಪವಾಗಿವೆ. ಶರಣರು ಕಾಯಕ ಮಹತ್ವ, ತ್ರಿವಿಧ ದಾಸೋಹ ಪರಿಕಲ್ಪನೆ, ಸಾಮಾಜಿಕ ಸಮಾನತೆ, ಸ್ವಾತಂತ್ರ್ಯ, ದಯೆ ಮತ್ತು ಧರ್ಮದ ಪರಿಕಲ್ಪನೆ, ಅಸ್ಪೃಶ್ಯತೆ, ಅನುಭಾವ, ಕಲ್ಯಾಣ ಸಮಾಜದ ನಿರ್ಮಾಣ ಮೊದಲಾದ ವೈಶಿಷ್ಟ್ಯಪೂರ್ಣ ಪರಿಕಲ್ಪನೆಗಳನ್ನು ಇಡೀ ಮನುಕುಲಕ್ಕೆ ನೀಡಿದ್ದಾರೆ. ಶರಣರ ಚಿಂತನೆಗಳನ್ನು ಮಕ್ಕಳಿಗೆ ಬಾಲ್ಯದಲ್ಲಿಯೇ ಬಿತ್ತಿ ಬೆಳೆಯುವ ಕಾರ್ಯಕ್ಕೆ ಎಲ್ಲರೂ ಮುಂದಾಗಬೇಕು ಎಂದರು.

ನಿರ್ಮಲಾ ಅರಳಿ ಅವರು ಕೊಡಮಾಡಿದ ಅಂದಪ್ಪ ಮಾಗಳದ ಮತ್ತು ಶಾಂತಾ ಅಬ್ಬಿಗೇರಿ ಅವರು ಕೊಡಮಾಡಿದ ಶಾಂತಪ್ಪ ಅಬ್ಬಿಗೇರಿ ಅವರ ಹೆಸರಿನ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಬಿ.ಎಸ್. ಬಾಳೇಶ್ವರಮಠ, ನಾಗರಾಜ ಕುಲಕರ್ಣಿ ಉಪನ್ಯಾಸ ನೀಡಿದರು.

ಶರಣ ಚಿಂತಕ ಡಿ.ಬಿ. ಬಳಿಗಾರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಾಹಿತಿಗಳಾದ ದೇವಣ್ಣ ಬಳಿಗಾರ, ಪೂರ್ಣಾಜಿ ಖರಾಟೆ, ಬಸಣ್ಣ ಬೆಟಗೇರಿ, ಲಲಿತಾ ಕೆರಿಮನಿ, ಗಂಗಾಧರ ಅರಳಿ ಸೇರಿ ಹಲವರಿದ್ದರು. ನಿರ್ಮಲಾ ಅರಳಿ ಪ್ರಾಸ್ತಾವಿಕ ನುಡಿದರು. ಎಲ್.ಎಸ್. ಅರಳಿಹಳ್ಳಿ, ರತ್ನಾ ಕರ್ಕಿ, ಶಾಂತಾ ಮಾಳವಾಡ ನಿರೂಪಿಸಿದರು.

# ಅರಾವಳಿ ಸಮಗ್ರ ಪರೀಕ್ಷೆಗೆ ತಜ್ಞರ ಸಮಿತಿ ರಚಿಸಲು ಸುಪ್ರೀಂ ಸೂಚನೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅಕ್ರಮ ಗಣಿಗಾರಿಕೆಯಿಂದ ಸರಿಪಡಿಸಲಾಗದ ಹಾನಿ ಉಂಟಾಗಬಹುದು ಎಂದು ಗಮನಿಸಿದ ಸುಪ್ರೀಂ ಕೋರ್ಟ್, ಅರಾವಳಿಯಲ್ಲಿ ಗಣಿಗಾರಿಕೆ ಮತ್ತು ಸಂಬಂಧಿತ ಸಮಸ್ಯೆಗಳ ಸಮಗ್ರ ಪರೀಕ್ಷೆಯನ್ನು ಕೈಗೊಳ್ಳಲು ಡೊಮೇನ್ ತಜ್ಞರನ್ನು ಒಳಗೊಂಡ ತಜ್ಞರ ಸಮಿತಿಯನ್ನು ರಚಿಸುವುದಾಗಿ ಬುಧವಾರ ಹೇಳಿದೆ.

ಗಣಿಗಾರಿಕೆಯಲ್ಲಿ ಪರಿಣತಿ ಹೊಂದಿರುವ ಪರಿಸರವಾದಿಗಳು ಮತ್ತು ವಿಜ್ಞಾನಿಗಳ ಹೆಸರುಗಳನ್ನು ನಾಲ್ಕು ವಾರಗಳಲ್ಲಿ ಸೂಚಿಸುವಂತೆ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿಪುಲ್ ಎಂ. ಪಂಚೋಲಿ ಅವರನ್ನೊಳಗೊಂಡ ಪೀಠವು ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯ ಭಾಟಿ, ಅಮಿಕಸ್ ಕ್ಯೂರಿ ಕೆ. ಪರಮೇಶ್ವರ್ ಅವರಿಗೆ ನಿರ್ದೇಶನ ನೀಡಿದೆ. ಇದರಿಂದಾಗಿ ಅಂಶಗಳನ್ನು ಪರಿಶೀಲಿಸಲು ತಜ್ಞರ ಮಂಡಳಿಯನ್ನು ರಚಿಸಬಹುದಾಗಿದೆ.

ಸಮಿತಿಯು ಈ ನ್ಯಾಯಾಲಯದ ನಿರ್ದೇಶನ ಮತ್ತು ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸುತ್ತದೆ ಎಂದು ಪೀಠ ಹೇಳಿದೆ.

ಅರಾವಳಿ ಬೆಟ್ಟಗಳು ಮತ್ತು ಶ್ರೇಣಿಗಳ ಏಕರೂಪದ ವ್ಯಾಖ್ಯಾನವನ್ನು ಅಂಗೀಕರಿಸುವ ನವೆಂಬರ್ 20ರ ನಿರ್ದೇಶನಗಳನ್ನು ತಡೆಹಿಡಿದ ಸುಪ್ರೀಂ ಕೋರ್ಟ್ ತನ್ನ ಆದೇಶವನ್ನು ಸಹ ವಿಸ್ತರಿಸಿದೆ.



# ಮೋದಿ ಕಾರ್ಯಕ್ರಮದಲ್ಲಿ ಸಮೋಸ ವಿತರಣೆಗೆ 2 ಕೋಟಿ ರೂ. ಖರ್ಚು : ಬಿಜೆಪಿ ವಿರುದ್ಧ ಕೇಜ್ರಿವಾಲ್ ಆರೋಪ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಧಾನಿ ನರೇಂದ್ರ ಮೋದಿಯವರು ಇತ್ತೀಚೆಗೆ ಗುಜರಾತ್‌ನ ಬುಡಕಟ್ಟು ಪ್ರದೇಶಕ್ಕೆ ಭೇಟಿ ನೀಡಿದ ಕಾರ್ಯಕ್ರಮಕ್ಕೆ 50 ಕೋಟಿ ರೂಪಾಯಿ ಖರ್ಚು ಮಾಡಲಾಗಿದೆ ಎಂದು ಆಮ್ ಆದ್ಮಿ ಪಕ್ಷದ (ಎಎಪಿ) ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಸೋಮವಾರ (ಜ.19) ಆರೋಪಿಸಿದ್ದು, ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಆರ್‌ಟಿಐ ಮಾಹಿತಿಯನ್ನು ಉಲ್ಲೇಖಿಸಿದ ಕೇಜ್ರಿವಾಲ್, 50 ಕೋಟಿಯಲ್ಲಿ 2 ಕೋಟಿ ರೂಪಾಯಿಯನ್ನು ಸಮೋಸ ವಿತರಣೆಗೆ ಮಾತ್ರ ಖರ್ಚು ಮಾಡಲಾಗಿದೆ ಎಂದಿದ್ದಾರೆ.

"ಆದಿವಾಸಿ ಪ್ರದೇಶಗಳು ಇನ್ನೂ ಅತ್ಯಂತ ಹಿಂದುಳಿದಿವೆ? ಪ್ರತಿ ವರ್ಷ ಕೋಟ್ಯಂತರ ರೂಪಾಯಿ ಖರ್ಚು ಮಾಡುತಿದ್ದರೂ ಏಕೆ ಬದಲಾವಣೆ ಆಗುತ್ತಿಲ್ಲ? ನಾವು ಹಣವನ್ನು ಪ್ರಾಮಾಣಿಕವಾಗಿ ಖರ್ಚು ಮಾಡಿದರೆ, ಅದ್ಭುತ ಆಸ್ಪತ್ರೆಗಳನ್ನು ಕಟ್ಟಬಹುದು, ಉತ್ತಮ ಶಾಲೆಗಳನ್ನು ತೆರೆಯಬಹುದು, ಉಚಿತ ವಿದ್ಯುತ್ ಒದಗಿಸಬಹುದು, ಉತ್ತಮ ರಸ್ತೆಗಳನ್ನು ನಿರ್ಮಿಸಬಹುದು.

### ಪತ್ರಿಕಾಗೋಷ್ಠಿಯಲ್ಲಿ ಚಿಕೇನಕೊಪ್ಪದ ಪೂಜ್ಯಶ್ರೀ ಶಿವಶಾಂತವೀರ ಶರಣರು

# ಶ್ರೀ ಚನ್ನವೀರ ಶರಣರ ಜಾತ್ರಾ ಮಹೋತ್ಸವ ಜ. 25ಕ್ಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಮೌನಯೋಗಿ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ ಹಾಗೂ ಜಾತ್ರಾ ಮಹೋತ್ಸವದ ಮಹಾರಥೋತ್ಸವವು ಜ. 25ರಂದು ಸಂಜೆ 5 ಗಂಟೆಗೆ ಜರುಗುವದು. ಜಾತ್ರಾ ಮಹೋತ್ಸವದ ಅಂಗವಾಗಿ ಮಹಾತ್ಮರ ಜೀವನ ದರ್ಶನ ಪ್ರವಚನ, ಮಹಾರಥೋತ್ಸವ, ಲಘು ರಥೋತ್ಸವ, ಜಾನಪದ ಕಲಾಮೇಳ, ಸಾಮೂಹಿಕ ವಿವಾಹಗಳು, ಸುಮಂಗಲೆಯರಿಗೆ ಉಡಿ ತುಂಬುವದು, ತುಲಾಭಾರ, ಧಾರ್ಮಿಕ ಚಿಂತನಗೋಷ್ಠಿ ಹಾಗೂ ಶರಣಶ್ರೀ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ ಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು ಹೇಳಿದರು.

ಅವರು ನಗರದ ಪತ್ರಿಕಾಭವನದಲ್ಲಿ ಬುಧವಾರ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜ. 24ರಂದು ಬೆಳಿಗ್ಗೆ 8 ಗಂಟೆಗೆ ಕುಷ್ಟಗಿಯ ಮದ್ದಾನಿ ಹಿರೇಮಠದ ಪೂಜ್ಯಶ್ರೀ ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಹಿರೇವಡ್ಡಟ್ಟಿ ಹಿರೇಮಠದ ಪೂಜ್ಯಶ್ರೀ ವೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಷಟಸ್ಥಲ ಧ್ವಜಾರೋಹಣ ನೆರವೇರಿಸಲಿದ್ದಾರೆ. ಸಂಜೆ 5 ಗಂಟೆಗೆ ಪ್ರಕಾಶ ಜಗದೀಶಪ್ಪ ಹುಗ್ಗಿ ಹಾಗೂ ಶರಣರ ಬಳಗ ರೋಣ ಅವರ ಮಹಾಮನೆಯಿಂದ ರಥದ ಕಳಸ ಆಗಮಿಸುವದು. ಸಂಜೆ 6 ಗಂಟೆಗೆ ಲಘು ರಥೋತ್ಸವ ಜರುಗುವದು.

ಸಂಜೆ 7 ಗಂಟೆಗೆ ಮಹಾತ್ಮರ ಜೀವನ ದರ್ಶನ ಪ್ರವಚನ ಮಂಗಲೋತ್ಸವ ಜರುಗುವದು. ಹೂವಿನ ಹಡಗಲಿ ಗವಿಮಠದ ಪೂಜ್ಯಶ್ರೀ ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳು ಪಾವನ ಸಾನ್ನಿಧ್ಯ ವಹಿಸುವರು. ಅಣದೂರ ನೀಲಕಂಠೇಶ್ವರ ಮಠದ ಪೂಜ್ಯಶ್ರೀ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು, ರಬಕವಿ ಬ್ರಹ್ಮಾನಂದ ಶ್ರೀಮಠದ ಪೂಜ್ಯಶ್ರೀ ಗುರುಸಿದ್ದೇಶ್ವರ ಸ್ವಾಮಿಗಳು ಸಮ್ಮುಖ ವಹಿಸುವರು. ಬಳೂಟಗಿಯ ಹಿರೇಮಠದ ಪೂಜ್ಯಶ್ರೀ ಶಿವಕುಮಾರ ಸ್ವಾಮಿಗಳು ಪ್ರವಚನ ಮಂಗಲದ ನುಡಿ ಆಡುವರು. ಸೋಮನಾಳದ ಶರಣು ಕೆ.ಹಿರೇಮಠ ಸಂಗೀತ ಸೇವೆ ನೀಡುವರು. ಗದುಗಿನ ಪಂಚಾಕ್ಷರಿ ಹೂಗಾರ ತಬಲಾ ಸಾಥ್ ನೀಡುವರು. ಇದೇ ಸಂದರ್ಭದಲ್ಲಿ ಶ್ರೀಮಠದ ಪೂಜ್ಯರಿಗೆ ದಾನಿಗಳಿಂದ ತುಲಾಭಾರದ ಭಕ್ತಿಸೇವೆ ಜರುಗಲಿದೆ ಎಂದರು.

ಜ. 25ರಂದು ಬೆಳಿಗ್ಗೆ 5 ಗಂಟೆಗೆ ಶ್ರೀ ಚನ್ನವೀರ ಶರಣರ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಹಾಗೂ ಲಿಂಗದೀಕ್ಷೆ, ಅಯ್ಯಾಚಾರ ಜರುಗಲಿದೆ. ಮೈನಳ್ಳಿ ಹಾಗೂ ಬಿಕನಳ್ಳಿ ಹಿರೇಮಠದ ಪೂಜ್ಯಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಹುಬ್ಬಳ್ಳಿಯ ವಿಶ್ವನಾಥ ಮಂದಿರದ ವೇ. ಮೂ. ಬಸಯ್ಯ ಶಾಸ್ತ್ರಿಗಳು, ಅಮರಾಪೂರದ ವೇ.ಮೂ. ಶ್ರೀ ಚನ್ನವೀರಯ್ಯ ಶಾಸ್ತ್ರಿಗಳು ಹಾಗೂ ಶ್ರೀಮಠದ ವೈದಿಕ ಪಾಠಶಾಲೆಯ ವಿದ್ಯಾರ್ಥಿಗಳಿಂದ ವೈದಿಕ ಕಾರ್ಯಕ್ರಮಗಳು ಜರುಗುವವು.

ಬೆಳಿಗ್ಗೆ 10 ಗಂಟೆಗೆ ಪೂಜ್ಯಶ್ರೀ ಚನ್ನವೀರ ಶರಣರ ಹರಕೆಯ ತೇರನ್ನು ಪೂಜ್ಯರು ಅಮೃತ ಹಸ್ತದಿಂದ ಲೋಕಾರ್ಪಣೆಗೊಳಿಸುವರು. 10.30 ಗಂಟೆಗೆ ಶ್ರೀ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ ಹಾಗೂ ಕಲ್ಯಾಣ ಮಹೋತ್ಸವ ಜರುಗುವದು. ಈ ಕಾರ್ಯಕ್ರಮದಲ್ಲಿ ಹೊಸಳ್ಳಿ ಬೂದೀಶ್ವರ ಸಂಸ್ಥಾನಮಠದ ಪೂಜ್ಯಶ್ರೀ ಜ. ಬೂದೀಶ್ವರ ಮಹಾಸ್ವಾಮಿಗಳು ಪಾವನ ಸಾನ್ನಿಧ್ಯ ವಹಿಸುವರು. ಅಗಡಿ-ಅಕ್ಕಿಮಠದ ಪೂಜ್ಯಶ್ರೀ ಗುರುಲಿಂಗ ಮಹಾಸ್ವಾಮಿಗಳು, ಗದುಗಿನ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು ಸಮ್ಮುಖ ವಹಿಸುವರು. ಗದುಗಿನ ವೆಂಕಟೇಶ ಆಲ್ಕೋಡ ಹಾಗೂ ತಂಡದವರಿಂದ ಭಕ್ತಿಸಂಗೀತ ಕಾರ್ಯಕ್ರಮ ಜರುಗುವುದು.

ಇದೇ ಸಂದರ್ಭದಲ್ಲಿ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕೌತಾಳದ ಪ್ರಗತಿಪರ ಕೃಷಿ ಮಹಿಳೆ ಡಾ. ಕವಿತಾ ಮಿಶ್ರಾ, ಬಾಗಲಕೋಟೆಯ ಅನ್ನಪೂರ್ಣ ಬಸಯ್ಯ ಬಳೂಲಮಠ ಹಾಗೂ ಬೆಂಗಳೂರಿನ ಕಡಬಗೆರೆ ಮುನಿರಾಜ ಮತ್ತು ತಂಡ ಇವರಿಗೆ ಸಿದ್ದಲಿಂಗನಗೌಡ ಎಸ್.ಜಂಗ್ಲೆಪ್ಪಗೌಡ್ರ ಮೆಮೋರಿಯಲ್ ಉಮಾ ವಿದ್ಯಾಶ್ರೀ ಟ್ರಸ್ಟ್ ನವಲಗುಂದ ಇವರ ಸಂಯುಕ್ತಾಶ್ರಯದಲ್ಲಿ ಶರಣಶ್ರೀ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ನಂತರ ಬೆಂಗಳೂರಿನ ಕಡಬಗೆರೆ ಮುನಿರಾಜ ಮತ್ತು ತಂಡದವರಿಂದ ಭಕ್ತಿ ರಸಮಂಜರಿ ಕಾರ್ಯಕ್ರಮ ಜರುಗುವದು. ಸಂಜೆ 4 ಗಂಟೆಗೆ ಬಳಗಾನೂರಿನ ಶರಣರ ಬಳಗ ಹಾಗೂ ಡಾ. ಶಿವಕುಮಾರಯ್ಯ ಶಂಕ್ರಯ್ಯ ಹಿರೇಮಠ ಅವರ ಮಹಾಮನೆಯಿಂದ ರಥದ ಹಗ್ಗವನ್ನು ತರಲಾಗುವದು. ಸಂಜೆ 5 ಗಂಟೆಗೆ ಪೂಜ್ಯಶ್ರೀ ಜಗದ್ಗುರುಗಳು, ಹರಗುರು ಚರಮೂರ್ತಿಗಳ ನೇತೃತ್ವದಲ್ಲಿ ಮಹಾರಥೋತ್ಸವ ಜರುಗುವದು.

ಸಂಜೆ 6 ಗಂಟೆಗೆ ಧಾರ್ಮಿಕ ಚಿಂತನಗೋಷ್ಠಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಕೊಪ್ಪಳ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಜಗದ್ಗುರು ಗವಿಸಿದ್ದೇಶ್ವರ ಮಹಾಸ್ವಾಮಿಗಳು ಪಾವನ ಸಾನ್ನಿಧ್ಯ ವಹಿಸುವರು. ಹೂವಿನಶಿಗ್ಲಿ ವಿರಕ್ತಮಠದ ಪೂಜ್ಯಶ್ರೀ ಚನ್ನವೀರ ಮಹಾಸ್ವಾಮಿಗಳು ಹಾಗೂ ಕನಕಗಿರಿ ಸುವರ್ಣಗಿರಿ ವಿರಕ್ತಮಠದ ಪೂಜ್ಯಶ್ರೀ ಡಾ. ಚನ್ನಮಲ್ಲ ಮಹಾಸ್ವಾಮಿಗಳು ಉಪದೇಶಾಮೃತ ನೀಡುವರು.

ಹೆಬ್ಬಾಳ ಬ್ರಹನ್ಮಠದ ಪೂಜ್ಯಶ್ರೀ ನಾಗಭೂಷಣ ಶಿವಾಚಾರ್ಯ ಮಹಾಸ್ವಾಮಿಗಳು, ಸುಕ್ಷೇತ್ರ ಗುಡದೂರಿನ ಪೂಜ್ಯಶ್ರೀ ನೀಲಕಂಠ ತಾತನವರು, ಖಜ್ಜಿಡೋಣಿಯ ಪೂಜ್ಯಶ್ರೀ ಕೃಷ್ಣಾನಂದ ಶಾಸ್ತ್ರಿಗಳು ಸಮ್ಮುಖ ವಹಿಸುವರು. ದಿಯಾ ಪೀರಸಾಬ ಕೌತಾಳ ಅವರಿಂದ ಸಂಗೀತ ಕಾರ್ಯಕ್ರಮ ನಡೆಯುವದು. ಬೆಂಗಳೂರು ಆಕಾಶವಾಣಿಯ ನಿರೂಪಕಿ ಸವಿತಾ ಶಿವಕುಮಾರ ಕಾರ್ಯಕ್ರಮ ನಿರೂಪಿಸುವರು.

ಜ. 26ರಂದು ಸಂಜೆ 5 ಗಂಟೆಗೆ ಕಡುಬಿನ ಕಾಳಗ ಹಾಗೂ ಶ್ರೀ ಶರಣರ ಬೆಳ್ಳಿಮೂರ್ತಿ ಉತ್ಸವ ಜರುಗುವದು. ಸುಕ್ಷೇತ್ರ ಬಳಗಾನೂರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಚನ್ನವೀರ ಶರಣರ ಬೆಳ್ಳಿಮೂರ್ತಿ ಉತ್ಸವ ಜರುಗುವದು. ನಂತರ ಶ್ರೀಮಠದಲ್ಲಿ ಕಡುಬಿನ ಕಾಳಗ ಜರುಗುವದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎ.ಎನ್. ನಾಗರಳ್ಳಿ, ವಿ.ಬಿ. ಪೊಲೀಸಪಾಟೀಲ, ಎಂ.ಬಿ. ಸಿಕ್ಕೆದೇಸಾಯಿ, ವಿ.ಎಸ್. ಹಿರೇಮಠ, ಎಸ್.ಬಿ. ಪಾಟೀಲ, ಎಸ್.ಎಸ್. ಪಾಟೀಲ, ಶಿವಲಿಂಗಯ್ಯ ಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ, ವಸಂತಮೇಟಿ, ಶೇಖಣ್ಣ ಗದ್ದಿಕೇರಿ, ಮನ್ನಾಪೂರ, ಗೌರಿಪೂರ, ವೈ.ಬಿ. ಡೊಳ್ಳಿನ, ಎಚ್.ಎಸ್. ವೆಂಕಟಾಪೂರ ಮುಂತಾದವರು ಉಪಸ್ಥಿತರಿದ್ದರು.

ಜ. 26ರಂದು ಸಂಜೆ 6 ಗಂಟೆಗೆ ಬೆಂಗಳೂರಿನ ಗಾಯಕರಾದ ಡಾ. ಶ್ರೀರಾಮ ಕಾಸರ್ ಮತ್ತು ತಂಡದವರಿಂದ ರಸಮಂಜರಿ ಹಾಗೂ ಚಲನಚಿತ್ರ ನಟ ಪ್ರವೀಣ ಗಸ್ತಿ ಮತ್ತು ಕಾಮಿಡಿ ಕಿಲಾಡಿಗಳಿಂದ ಹಾಸ್ಯ ಸಂಜೆ ಜರುಗುವದು. ರಾತ್ರಿ 9 ಗಂಟೆಗೆ ಸಿಡಿಮದ್ದು ಸುಡುವ ಕಾರ್ಯಕ್ರಮ, ರಾತ್ರಿ 10 ಗಂಟೆಗೆ ಬಳ್ಳಾರಿಯ ಅಭಿನಯ ಕಲಾಕೇಂದ್ರ ಅವರಿಂದ ಅಲ್ಲಿಪುರದ ಮಹಾದೇವ ತಾತನವರ ಭಕ್ತಿ ಪ್ರಧಾನ ನಾಟಕ ಪ್ರದರ್ಶನವಾಗಲಿದೆ ಎಂದು ಪೂಜ್ಯ ಶ್ರೀಗಳು ಹೇಳಿದರು.

# ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮಗಳು



### ಕಾರ್ಯಕ್ರಮಗಳು

ಜನವರಿ 26ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ, ರಾಷ್ಟ್ರಗೀತೆ, ನಾಡಗೀತೆ, ಪರೇಡ್ ವೀಕ್ಷಣೆ, ಪಥ ಸಂಚಲನ

ಮತ್ತು ವಂದನೆ ಸ್ವೀಕಾರ, ಗಣರಾಜ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತದಿಂದ ಗಣರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26ರಂದು ಬೆಳಿಗ್ಗೆ 9 ಗಂಟೆಗೆ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಧ್ವಜಾರೋಹಣ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಪ್ರಿಯಕರನೊಂದಿಗೆ ವಾಸಿಸಲು 'ಸುಳ್ಳು ಗೋಹತ್ಯೆ ಪ್ರಕರಣ'ದಲ್ಲಿ ಗಂಡನನ್ನು ಸಿಲುಕಿಸಿದ ಪತ್ನಿ



**■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ**

ತನ್ನ ಪ್ರಿಯಕರನೊಂದಿಗೆ ವಾಸಿಸಲು ವಿವಾಹಿತ ಮಹಿಳೆಯೊಬ್ಬಳು ಮಾಡಿದ ದುಷ್ಕೃತ್ಯವೊಂದರಲ್ಲಿ ಆಕೆಯ ಪತಿ ಸುಳ್ಳು ಗೋಹತ್ಯೆ ಪ್ರಕರಣಗಳಲ್ಲಿ ಎರಡು ಬಾರಿ ಪೊಲೀಸರಿಂದ ಬಂಧನಕ್ಕೆ ಒಳಗಾಗಬೇಕಾದ ಘಟನೆ ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆದಿದೆ.

ಇದೇ ಪ್ರಕರಣದ ತನಿಖೆ ನಡೆಸುತ್ತಿದ್ದ ಮೂವರು ಪೊಲೀಸ್ ಅಧಿಕಾರಿಗಳನ್ನು, ಮನೆಗೆ ಅಕ್ರಮವಾಗಿ ಪ್ರವೇಶಿಸಿದ ಆರೋಪಿಯನ್ನು ಬಂಧಿಸಿದ ಆರೋಪದ ಮೇಲೆ ಅಲಹಾಬಾದ್ ಹೈಕೋರ್ಟ್ ಸೇವೆಯಿಂದ ಅಮಾನತುಗೊಳಿಸುವಂತೆ ಸೂಚಿಸಿದೆ. ಪೊಲೀಸರ ಕ್ರಮಗಳಿಂದ ಉಂಟಾದ ಗದ್ದಲದ ನಡುವೆ ಪರಾರಿಯಾಗುವಲ್ಲಿ ಯಶಸ್ವಿಯಾದ ಮಹಿಳೆ, ಸಾಮಾಜಿಕ ಮಾಧ್ಯಮ ಮತ್ತು ಬಲಪಂಥೀಯ ಗುಂಪುಗಳನ್ನು ಬಳಸಿಕೊಂಡು ಪೊಲೀಸ್ ಹಸ್ತಕ್ಷೇಪವನ್ನು ಪ್ರಚೋದಿದ್ದಾಳೆ. ಕಾಗದ ಉದ್ಯಮದ ವ್ಯಾಪಾರಿಯಾಗಿರುವ ಪತಿಯ ಮೇಲೆ ಕೇಸ್ ದಾಖಲಿಸಲು, ಅವರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಮಾಂಸ ಇಟ್ಟು ಸಿಕ್ಕಿಹಾಕಿಸಲು ಎರಡು ಪ್ರತ್ಯೇಕ ಪ್ರಯತ್ನಗಳನ್ನು ಸಂಘಟಿಸಿದ್ದಾರೆ ಎಂದು ಪೊಲೀಸರು ಆರೋಪಿಸಿದ್ದಾರೆ.

ಒಬ್ಬ ಸಬ್-ಇನ್‌ಸ್ಪೆಕ್ಟರ್ ಮತ್ತು ಇಬ್ಬರು ಕಾನ್‌ಸ್ಟೆಬಲ್‌ಗಳು ಸೇರಿದಂತೆ ಮೂವರು ಪೊಲೀಸರ ಮೇಲೆ ಅತಿಕ್ರಮಣ ಮತ್ತು ಹೈ-ಸೆಕ್ಯುರಿಟಿ ವಲಯಕ್ಕೆ ಪ್ರವೇಶ ಪಡೆಯಲು ಸುಳ್ಳು ಮಾಹಿತಿ ಒದಗಿಸುವುದು ಸೇರಿದಂತೆ ಆರೋಪಗಳನ್ನು ಹೊರಿಸಲಾಗಿದೆ. ಪೊಲೀಸ್ ಅಧಿಕಾರಿಗಳು ಹೇಳುವ ಪ್ರಕಾರ, ಮಹಿಳೆ ಸುಮಾರು ಎರಡು ವರ್ಷಗಳ ಹಿಂದೆ ಇನ್‌ಸ್ಟಾಗ್ರಾಮ್ ಮೂಲಕ ತನ್ನ ಪ್ರಿಯಕರ, ಭೋಪಾಲ್‌ನ ಬಿಟೆಕ್ ಪದವೀಧರ ಎಂದು ಹೇಳಲಾದ ವ್ಯಕ್ತಿಯೊಂದಿಗೆ ಸಂಪರ್ಕಕ್ಕೆ ಬಂದಿದ್ದರು.

# ಎಲ್‌ಐಸಿ ಕಚೇರಿ ಬೆಂಕಿ ಪ್ರಕರಣಕ್ಕೆ ತಿರುವು : ಅಕ್ರಮ ಮುಚ್ಚಿ ಹಾಕಲು ಸಹೋದ್ಯೋಗಿಯಿಂದ ವ್ಯವಸ್ಥಾಪಕಿಯ ಕೊಲೆ ಎಂದ ತನಿಖೆ

**■ವಿಜಯಸಾಕ್ಷಿ ಸುದ್ದಿ, ಮಧುರೈ**

ಡಿಸೆಂಬರ್‌ನಲ್ಲಿ ಮಧುರೈನ ಜೀವ ವಿಮಾ ನಿಗಮ (ಎಲ್‌ಐಸಿ) ಕಚೇರಿಯಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಹಿರಿಯ ಮಹಿಳಾ ಅಧಿಕಾರಿಯೊಬ್ಬರು ಸಾವನ್ನಪ್ಪಿದ್ದು, ಆರಂಭದಲ್ಲಿ ನಂಬಿದಂತೆ ಅದು ಆಕಸ್ಮಿಕ ಸಾವಲ್ಲ, ಕೊಲೆ ಎಂದು ತಮಿಳುನಾಡು ಪೊಲೀಸರು ತೀರ್ಮಾನಿಸಿದ್ದಾರೆ. ಡಿಸೆಂಬರ್ 17ರಂದು ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ ಆರೋಪದ ಮೇಲೆ ಪುರುಷ ಸಹೋದ್ಯೋಗಿಯನ್ನು ಬಂಧಿಸಲಾಗಿದೆ.

ಬಂಧಿತ ಆರೋಪಿಯನ್ನು ಪಶ್ಚಿಮ ಪೆರುಮಾಳ್ ಮೇಸ್ತ್ರಿ ಬೀದಿಯಲ್ಲಿರುವ ಎಲ್‌ಐಸಿ ಕಚೇರಿಯ ಸಹಾಯಕ ಆಡಳಿತ ಅಧಿಕಾರಿ ಟಿ. ರಾಮ್ ಎಂದು ಗುರುತಿಸಲಾಗಿದೆ. ರಾಮ್ 54 ವರ್ಷದ ಕಲ್ಯಾಣಿ ನಂಬಿ ಅವರನ್ನು ಕೊಂದಿದ್ದು, ಕಚೇರಿ ಕ್ಯಾಬಿನ್‌ನಲ್ಲಿ ಸುಟ್ಟು ಕರಕಲಾಗಿರುವ ಮೃತದೇಹ ಕಂಡುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.


ಆರಂಭದಲ್ಲಿ ಎಸಿಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿದೆ ಎಂದು ಶಂಕಿಸಲಾಗಿತ್ತು. ಪೊಲೀಸರ ಹೆಚ್ಚಿನ ತನಿಖೆಯಲ್ಲಿ ಕಲ್ಯಾಣಿ ನಂಬಿಯ ಕ್ಯಾಬಿನ್‌ನೊಳಗೆ ರಾಮ್ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ ಎಂದು ತಿಳಿದುಬಂದಿದೆ. ವಿಮಾ ಕ್ಲೇಮ್ ಸೆಟಲ್‌ಮೆಂಟ್‌ಗಳಲ್ಲಿ ಅಕ್ರಮಗಳ ಬಗ್ಗೆ ಕಲ್ಯಾಣಿ ಗಂಭೀರ ಕಳವಳ ವ್ಯಕ್ತಪಡಿಸಿದ ನಂತರ, ಅವರನ್ನು ಮೌನಗೊಳಿಸಲು ಈ ಅಪರಾಧ ಮಾಡಲಾಗಿದೆ ಎಂದು ತನಿಖಾಧಿಕಾರಿಗಳು ಹೇಳಿದ್ದಾರೆ.

ತನಿಖೆಯಿಂದ ತಿಳಿದುಬಂದಂತೆ, ರಾಮ್ 40ಕ್ಕೂ ಹೆಚ್ಚು ಸಾವಿನ ಕ್ಲೈಮ್ ಫೈಲ್‌ಗಳನ್ನು ಬಹಳ ಸಮಯದಿಂದ ಪರಿಶೀಲಿಸುತ್ತಿದ್ದಾರೆ ಎಂದು ಹಲವಾರು ವಿಮಾ ಏಜೆಂಟ್‌ಗಳು ಕಲ್ಯಾಣಿಗೆ ದೂರು ನೀಡಿದ್ದರು. ಕಲ್ಯಾಣಿ ಈ ಸಂಬಂಧ ರಾಮ್ ಅವರನ್ನು ಪ್ರಶ್ನಿಸಿ, ವಿಷಯವನ್ನು ಹಿರಿಯ ಅಧಿಕಾರಿಗಳಿಗೆ ತಿಳಿಸುವುದಾಗಿ ಎಚ್ಚರಿಸಿದ್ದರು. ಹಾಗಾಗಿ, ಕಲ್ಯಾಣಿಯ ಸದ್ದಡಗಿಸಲು ಮತ್ತು ಬಾಕಿ ಇರುವ ಫೈಲ್‌ಗಳನ್ನು ನಾಶಮಾಡಲು ರಾಮ್ ನಿರ್ಧರಿಸಿದ್ದಾರೆ ಎಂದು ವರದಿಯಾಗಿದೆ.

ಆರಂಭದಲ್ಲಿ ಬೆಂಕಿ ಆಕಸ್ಮಿಕ ಎಂದು ನಂಬಲಾಗಿದ್ದರೂ, ಮೃತ ಕಲ್ಯಾಣಿ ಅವರ ಮಗ ಪೊಲೀಸರಿಗೆ ದೂರು ನೀಡಿದಾಗ ಅನುಮಾನಗಳು ಹುಟ್ಟಿಕೊಂಡಿತ್ತು. ಬೆಂಕಿ ಘಟನೆ ನಡೆಯುವ ಕೆಲವೇ ನಿಮಿಷಗಳ ಮೊದಲು ತಾಯಿ ತನಗೆ ಕರೆ ಮಾಡಿದ್ದರು. ಆಕೆ ಅಳುತ್ತಾ, ತಕ್ಷಣ ಪೊಲೀಸರಿಗೆ ತಿಳಿಸುವಂತೆ ಹೇಳಿದ್ದರು ಎಂದು ಕಲ್ಯಾಣಿಯವರ ಮಗ ತನ್ನ ದೂರಿನಲ್ಲಿ ವಿವರಿಸಿದ್ದರು.

### ರಾಜೋಟೇಶ್ವರ ನಗರದಲ್ಲಿ ಕೆಲವರಿಂದ ಗೂಂಡಾ ವರ್ತನೆ; ಸಾರ್ವಜನಿಕರಿಗೆ ಕಿರಿಕಿರಿ

# ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಗದಗ**

ನಕಲಿ ದಾಖಲೆ ಸೃಷ್ಟಿಸಿ ರಾಜೋಟೇಶ್ವರ ನಗರದ ನಿವಾಸಿಗಳಿಗೆ ತೊಂದರೆ ನೀಡುತ್ತ ಸರಕಾರಿ ಕಾಮಗಾರಿಗಳಿಗೆ ವಿನಾಕಾರಣ ಅಡ್ಡಿ ಮಾಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ರಾಜೋಟೇಶ್ವರ ನಗರದ ನಿವಾಸಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ರಾಜೋಟೇಶ್ವರ ನಗರ ಕ್ಷೇಮಾಭಿವೃದ್ಧಿ ಟ್ರಸ್ಟ್‌ನ ಅಧ್ಯಕ್ಷರಾದ ರವಿ ಗುಂಜೀಕರ ಮಾತನಾಡಿ, ಲೇಔಟ್ ಮಾಲಿಕರು ಎಂದು ಹೇಳಿಕೊಂಡು ಒಟ್ಟು ಮೊಕ್ತಿಯಾರ್ ಪತ್ರ ಹೊಂದಿದ್ದೇವೆ ಎಂದು ಅಬ್ರಾರಮಹ್ಮದಅಲಿ ಬಿಜಾಪೂರ, ಶಾರುಖಫರಹಾದ ಬಿಜಾಪೂರ, ಸುಹೇಲ ಇಮಾಮಸಾಬ ಬಿಜಾಪೂರ ಹಾಗೂ ಉಮರಫಾರುಖ ಸಿರಾಜಅಹ್ಮದ ಬಿಜಾಪೂರ ಎನ್ನುವ ವ್ಯಕ್ತಿಗಳು ಪದೇ ಪದೇ ರಾಜೋಟೇಶ್ವರ ನಗರದ ಉದ್ಯಾನವನಕ್ಕೆ ಬಂದು ಈ ಉದ್ಯಾನವನದ ಸ್ಥಳದಲ್ಲಿ ತಮ್ಮ ನಿವೇಶನಗಳು ಇವೆ ಎಂದು ಸುಳ್ಳು ಹೇಳಿ ಶುದ್ಧ ನೀರಿನ ಘಟಕದ ಸರ್ಕಾರಿ ಕಾಮಗಾರಿ ನಡೆಸಲು ತೊಂದರೆ ಕೊಡುತ್ತಿದ್ದಾರೆ. ಗುತ್ತಿಗೆದಾರರಿಗೆ, ಕಾರ್ಮಿಕರಿಗೆ ಬೆದರಿಕೆ ಹಾಕಿ, ಸಾರ್ವಜನಿಕರಿಗೆ ಅವಾಚ್ಯ ಶಬ್ದಗಳಿಂದ ಮಾತನಾಡಿ ಗೂಂಡಾ ವರ್ತನೆ ಮಾಡುತ್ತಿದ್ದಾರೆ. ಈ ವ್ಯಕ್ತಿಗಳು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಪಾರ್ಕ್‌ನ ಪ್ಲಾಟ್ ನಂ. 48ರಲ್ಲಿ ವಿಭಜನೆ ತೋರಿಸಿ ಕ್ರಸಂ 49, 50, 51 ಹಾಗೂ 52ನೇ ನಿವೇಶನಗಳು ತಮ್ಮವು ಎಂದು ಹೇಳುತ್ತಿದ್ದಾರೆ. ಇದರಲ್ಲಿ ಸರ್ಕಾರಿ ಅಧಿಕಾರಿಗಳು ಸಹ ಶಾಮೀಲು ಇದ್ದಾರೆಂದು ಆರೋಪಿಸಿದರು.

ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿದ ಅಧಿಕಾರಿಗಳ ಮೇಲೆ ಹಾಗೂ ಕಾನೂನುಬಾಹಿರವಾಗಿ ವರ್ತಿಸಿದ ಎಲ್ಲರ ಮೇಲೆ ಕ್ರಮ ಕೈಗೊಂಡು ಅಲ್ಲಿ ಸಾರ್ವಜನಿಕರಿಗೆ ಜರೂರಾಗಿ ಬೇಕಾಗಿರುವ ಶುದ್ಧ ನೀರಿನ ಘಟಕದ ಕಾಮಗಾರಿಯನ್ನು ತಕ್ಷಣ ಪ್ರಾರಂಭಿಸಿ ಅನುಕೂಲ ಮಾಡಿಕೊಡಬೇಕೆಂದು ರವಿ ಗುಂಜೀಕರ ಹೇಳಿದರು.

ಈ ಸಂದರ್ಭದಲ್ಲಿ ರಾಜೋಟೇಶ್ವರ ನಗರ ಕ್ಷೇಮಾಭಿವೃದ್ಧಿ ಟ್ರಸ್ಟ್‌ನ ಗೌರವಧ್ಯಕ್ಷ ಸುಧೀರಸಿಂಹ ಘೋರ್ಪಡೆ, ಉಪಾಧ್ಯಕ್ಷರಾದ ಡಾ. ಎಸ್.ಆರ್. ಹಿರೇಮಠ, ಸದಸ್ಯರಾದ ಬಸವರಾಜ ಹಡಪದ, ಅಂಬರೀಶ ಇಟಗಿ, ಎಸ್.ಪಿ. ಪಾವನ, ನಂದಾ ಶಾಸ್ತ್ರಿ, ಈರಣ್ಣ ನವಲಿ, ನೀಲಮ್ಮ ಬೋಳನವರ, ಶರಣಪ್ಪ ಬೋಳನವರ, ಎಂ.ಬಿ. ತುಪ್ಪದ, ಮಂಜುನಾಥ ಮಾನೆ, ತೋಟಪ್ಪ ಕರಮುಡಿ ಮುಂತಾದವರು ಉಪಸ್ಥಿತರಿದ್ದರು.

### ಶಿರಹಟ್ಟಿಯಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಆಚರಣೆ

# ನುಡಿದಂತೆ ನಡೆದ ಶರಣ ಅಂಬಿಗರ ಚೌಡಯ್ಯ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬುಧವಾರ ಶಿರಹಟ್ಟಿಯಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ 906ನೇ ಜಯಂತಿಯ ಅಂಗವಾಗಿ ಪಟ್ಟಣದ ಮ್ಯಾಗೇರಿ ಓಣಿಯಿಂದ ಬೃಹತ್ ಭಾವಚಿತ್ರ ಮೆರವಣಿಗೆಯ ಮೂಲಕ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಹಸೀಲ್ದಾರ ಕಚೇರಿಯಲ್ಲಿ ತಾಲೂಕಾ ಆಡಳಿತದ ವತಿಯಿಂದ ಜಯಂತಿ ಆಚರಿಸಲಾಯಿತು.

ಅಂಬಿಗರ ಚೌಡಯ್ಯ ಸಮಾಜದ ತಾಲೂಕಾಧ್ಯಕ್ಷ ಅಶೋಕ ಹುಬ್ಬಳ್ಳಿ ಮಾತನಾಡಿ, ಚೌಡಯ್ಯನವರು ಕಲ್ಯಾಣದಲ್ಲಿ ತ್ರಿಪುರಾಂತಕ ಕೆರೆಯಲ್ಲಿ ದೋಣಿ ನಡೆಸುವ ಕಾಯಕ ಕೈಗೊಂಡು ಕಾಯಕ, ದಾಸೋಹ, ಶಿವಯೋಗ ಸಾಧನೆಯ ಮೂಲಕ ಅನೇಕ ವಚನಗಳನ್ನು ಬರೆದಿದ್ದಾರೆ. ಬೆನ್ನಿಗೆ ವಚನ ಸಾಹಿತ್ಯ ಕಟ್ಟುಗಳನ್ನು ಕಟ್ಟಿಕೊಂಡು ಖಡ್ಗ ಹಿಡಿದು ಹೋರಾಡಿದ ವೀರ ಗಣಾಚಾರಿ ಶರಣರಾಗಿದ್ದಾರೆ. ತುಂಬಿದ ನದಿಯಲ್ಲಿ ದೋಣಿಗೆ ಹುಟ್ಟು ಹಾಕುವ ಅಂಬಿಗ ಮಾತ್ರನಲ್ಲದೇ, ಭವಸಾಗರವೆಂಬ ಈ ಸಂಸಾರದ ವಾರಿಧಿಯನ್ನು ಅರಿವೆಂಬ ಹುಟ್ಟು ಹಾಕಿ ದಾಟಿಸುವ ಕೌಶಲ್ಯವುಳ್ಳವರಾಗಿದ್ದರು. ಅಪಾರ ಅನುಭಾವದ ಅಮೃತವನ್ನು ಚಾಟಿ ಏಟಿನೊಂದಿಗೆ ಕೊಟ್ಟು ಹೊಡೆದೆಬ್ಬಿಸಿ ಚುಚ್ಚು ಮಾತಿನ ಬಿಚ್ಚು ಹೃದಯದ ಕೆಚ್ಚಿನ ಅಮರ ವಚನಗಳು, ನುಡಿದಂತೆ ನಡೆದ, ನಡೆದಂತೆ ನುಡಿದ ಧೀರ-ವೀರ ಶರಣರಾಗಿದ್ದರು ಇವರ ಆದರ್ಶ ಇಂದಿನ ಸಮಾಜಕ್ಕೆ ಸ್ಫೂರ್ತಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ ರಾಘವೇಂದ್ರ ರಾವ್, 12ನೇ ಶತಮಾನದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರು ಆ ಕಾಲದ ಅಸಂಖ್ಯಾತ ಶರಣ ಸಂಕುಲದಲ್ಲಿ ವಿಭಿನ್ನ ವ್ಯಕ್ತಿತ್ವ ಹೊಂದಿರುವ ವೀರಗಣಾಚಾರಿ, ತತ್ವನಿಷ್ಠೆ, ಶ್ರೇಷ್ಠ ತತ್ವಜ್ಞಾನಿಯಾಗಿ, ವಚನಕಾರರಾಗಿ ಅನೇಕ ಬಿರುದುಗಳನ್ನು ಪಡೆದು ತಮ್ಮ ವಚನಗಳ ಮೂಲಕ ಸಮಾಜದಲ್ಲಿ ಜಾಗೃತಿಯನ್ನು ಮೂಡಿಸುತ್ತಿದ್ದರು ಎಂದರು.

ತಾಲೂಕಾ ಆಡಳಿತದ ವತಿಯಿಂದ ತಹಸೀಲ್ದಾರ ಕಚೇರಿಯಲ್ಲಿ ಜರುಗಿದ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಪಾಲ್ಗೊಂಡು ಮಾತನಾಡಿದರು.

ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಸಬ್ ರಜಿಸ್ಟ್ರಾರ್ ಶರಣಪ್ಪ ಪವಾರ, ಎಚ್.ಎಂ. ದೇವಗಿರಿ, ಹೊನ್ನಪ್ಪ ಶಿರಹಟ್ಟಿ, ರವಿ ಗುಡಿಮನಿ, ಪ್ರವೀಣ ಹುಬ್ಬಳ್ಳಿ, ಆನಂದ ಕೋಳಿ, ಬಾಬಾಜಾನ ಕೋಳಿವಾಡ, ಶಫಿ ಹೆಸರೂರ, ಪ್ರಕಾಶ ಸುಣಗಾರ, ಮಂಜು ಹುಬ್ಬಳ್ಳಿ, ಪ್ರಶಾಂತ ಹುಬ್ಬಳ್ಳಿ, ಕೃಷ್ಣಪ್ಪ ಹುಬ್ಬಳ್ಳಿ, ಕಾರ್ತಿಕ ಸುಣಗಾರ, ಉಮ್ಮಣ್ಣ ಸುಣಗಾರ, ನಿಂಗಪ್ಪ ಹುಬ್ಬಳ್ಳಿ, ಸಂಜು ಹುಬ್ಬಳ್ಳಿ, ಪ್ರದೀಪ ಹುಬ್ಬಳ್ಳಿ, ಚಂದ್ರಶೇಖರ ಹುಬ್ಬಳ್ಳಿ, ಶಂಕರಪ್ಪ ಬಾರ್ಕಿ, ನಿಂಗಪ್ಪ ವಡವಿ, ಶರಣಪ್ಪ ಹುಬ್ಬಳ್ಳಿ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka